For more job news visit : www.kpscvaani.com

**ಕರ್ನಾಟಕ ಸರ್ಕಾರ**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**
**ಬೆಂಗಳೂರು**

**ಸಂಖ್ಯೆ:ಇಡಿ/ಕೆಇಎ/29/ನೇ.ವಿ./2026(ಕೆಕೆ)** **ದಿನಾಂಕ: 03.09.2026**

## ಅಧಿಸೂಚನೆ

ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಅಧೀನದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ **ಕಲ್ಯಾಣ-ಕರ್ನಾಟಕ ರಾಜ್ಯ ವ್ಯಾಪ್ತಿ ಸ್ಥಳೀಯ ವೃಂದದ**ಲ್ಲಿ ಖಾಲಿಯಿರುವ **ಗ್ರೂಪ್-ಎ ವೃಂದದ ಪ್ರಾಂಶುಪಾಲರ** ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ **ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರತ ಅರ್ಹ ಉಪನ್ಯಾಸಕರುಗಳಿಂದ** ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಉಪನ್ಯಾಸಕರುಗಳು ಪ್ರಾಂಶುಪಾಲರ ಹುದ್ದೆಯ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

**ಪ್ರಾಂಶುಪಾಲರ ನೇರ ನೇಮಕಾತಿ ಕೋಟಾದ ಹುದ್ದೆಗಳ ವಿವರ;**

| **ಹುದ್ದೆಯ ವಿವರ** | **ವೇತನ ಶ್ರೇಣಿ ರೂ.ಗಳಲ್ಲಿ** | **ಹುದ್ದೆಗಳ ಸಂಖ್ಯೆ** |
|---|---|---|
| ಪ್ರಾಂಶುಪಾಲರು<br>(ಕಲ್ಯಾಣ-ಕರ್ನಾಟಕ ರಾಜ್ಯ ವ್ಯಾಪ್ತಿ ಸ್ಥಳೀಯ ವೃಂದ) | 90200-159200 | 31 |

**(ಗಮನಿಸಿ: ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಸರ್ಕಾರ / ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ನೀಡಿದಂತೆ ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ**).

### 1. ಶೈಕ್ಷಣಿಕ ಅರ್ಹತೆ:-

| **ಹುದ್ದೆ** | **ಶೈಕ್ಷಣಿಕ ಅರ್ಹತೆ** |
|---|---|
| ಪ್ರಾಂಶುಪಾಲರು | ಶಾಲಾ ಶಿಕ್ಷಣ ಇಲಾಖೆಯ (ಸರ್ಕಾರಿ ಪದವಿ ಪೂರ್ವ ಕಾಲೇಜುಗಳ) ಉಪನ್ಯಾಸಕರ ವೃಂದದಲ್ಲಿ ಕನಿಷ್ಠ ಹತ್ತು ವರ್ಷಗಳ ಸೇವೆಯನ್ನು ಪೂರೈಸಿರಬೇಕು ಮತ್ತು ಖಾಯಂಪೂರ್ವ ಸೇವಾವಧಿಯನ್ನು ತೃಪ್ತಿಕರವಾಗಿ ಪೂರೈಸಿರಬೇಕು. |

**ಟಿಪ್ಪಣಿ:-**

a) ಮೇಲೆ ನಮೂದಿಸಿದಂತೆ ಶೈಕ್ಷಣಿಕ ಅರ್ಹತೆಯನ್ನು ಹೊಂದದೇ ಇರುವ ಉಪನ್ಯಾಸಕರುಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ಸರ್ಕಾರ / ಪ್ರಾಧಿಕಾರಕ್ಕೆ ಅಥವಾ ನೇಮಕಾತಿ ಸಮಿತಿಗೆ ಶೈಕ್ಷಣಿಕ ಅರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಉಪನ್ಯಾಸಕರುಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

b) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ಶೈಕ್ಷಣಿಕ ಅರ್ಹತೆಯನ್ನು ಹೊಂದಿರಬೇಕು.

### 2. ವಯೋಮಿತಿ:-

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ನೇರ ನೇಮಕಾತಿ ಕೋಟಾದ ಶೇ.100 ರಷ್ಟು ಪ್ರಾಂಶುಪಾಲರ ಹುದ್ದೆಗಳನ್ನು ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)(ಸರ್ಕಾರಿ ಪದವಿ ಪೂರ್ವ ಕಾಲೇಜು) ಯಲ್ಲಿ ವಿವಿಧ ವಿಷಯಗಳ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ, 10 ವರ್ಷಗಳ ಸೇವೆಯನ್ನು ಪೂರೈಸಿರುವ ಉಪನ್ಯಾಸಕರಿಂದ ಭರ್ತಿ ಮಾಡಲು ಅವಕಾಶ ಕಲ್ಪಿಸಿರುವುದರಿಂದ ವಯೋಮಿತಿಯ ಮಿತಿ ಇರುವುದಿಲ್ಲ.

### 3. ಅರ್ಜಿ ಸಲ್ಲಿಸುವ ವಿಧಾನ:-

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್: https://cetonline.karnataka.gov.in/kea/ ನಲ್ಲಿ ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಉಪನ್ಯಾಸಕರುಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

For more job news visit : www.kpscvaani.com

**4. ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ:**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **07.09.2026** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **04.10.2026** |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **05.10.2026** |

ಉಪನ್ಯಾಸಕರುಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಸಮಯದಲ್ಲಿ ಆದರೂ ಯಾವುದೇ ಮುನ್ಸೂಚನೆಯನ್ನು ನೀಡದೇ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಇಲಾಖೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

**5. ವೇತನ ಶ್ರೇಣಿ:**

2024 ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿ ಅನ್ವಯ - ರೂ. 90200-2300-99400-2700-115600-3100-134200-3500-155200-4000-159200 - ಅನ್ವಯವಾಗಲಿವೆ.

**6. ಪಿಂಚಣಿ ಸೌಲಭ್ಯ ಕುರಿತು:**

ಪ್ರಾಂಶುಪಾಲರ ಹುದ್ದೆಗೆ ನೇಮಕವಾಗುವ ಅಧಿಕಾರಿಗಳಿಗೆ ಅವರು ಉಪನ್ಯಾಸಕರಾಗಿ ಮೂಲ ನೇಮಕಾತಿ ಹೊಂದಿದ ಸಂದರ್ಭದಲ್ಲಿ ಅನ್ವಯವಾಗಿದ್ದ ಪಿಂಚಣಿ ನಿಯಮಗಳೇ ಅನ್ವಯವಾಗುವುದು.

**7. ಶುಲ್ಕ:**

ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ.1500/- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ತೃತೀಯ ಲಿಂಗದ ಅಭ್ಯರ್ಥಿಗಳು | ರೂ.1000/- | |
| ವಿಶೇಷ ಚೇತನ ಅಭ್ಯರ್ಥಿಗಳಿಗೆ | ರೂ.500/- | |

**8. ಪರೀಕ್ಷಾ ದಿನಾಂಕ:**

| | |
|---|---|
| **ಪತ್ರಿಕೆ-1** | ಸ್ಪರ್ಧಾತ್ಮಕ ಪರೀಕ್ಷೆಗೆ ವಿವರವಾದ ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು. |
| **ಪತ್ರಿಕೆ-2** | |
| **ಪತ್ರಿಕೆ-3** | |

**9. ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:**

I. ಪ್ರಾಂಶುಪಾಲರ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು **ಆನ್‌ಲೈನ್(CBT)** ಅಥವಾ **ಆಫ್‌ಲೈನ್-ಒಎಂಆರ್ ಮಾದರಿ (Offline-OMR type)** ಯಲ್ಲಿ ನಡೆಸಲಾಗುವುದು.

II. ಪ್ರಶ್ನೆಗಳು ಬಹು ಆಯ್ಕೆ ಪ್ರಕಾರದ್ದಾಗಿರುತ್ತವೆ.

III. **ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುವ ಪರೀಕ್ಷಾ ಕೇಂದ್ರದ ವಿವರಗಳನ್ನು ನಂತರದಲ್ಲಿ ತಿಳಿಸಲಾಗುವುದು(ಆಡಳಿತಾತ್ಮಕ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ)** ಉಪನ್ಯಾಸಕರುಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಉಪನ್ಯಾಸಕರು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ / ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.
**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.)**

For more job news visit : www.kpscvaani.com

**10. ಪ್ರಶ್ನೆಪತ್ರಿಕೆ ಮತ್ತು ಪಠ್ಯಕ್ರಮ:**

| ಪತ್ರಿಕೆ | ವಿಷಯ | ಒಟ್ಟು ಪ್ರಶ್ನೆಗಳು | ಗರಿಷ್ಠ ಅಂಕಗಳು | ಅವಧಿ (ಗಂಟೆ |
|---|---|---|---|---|
| ಪತ್ರಿಕೆ-1 | **ಕನ್ನಡ ಭಾಷಾ ಪರೀಕ್ಷೆ:-** 1). ವಿಷಯದ ಸಮಗ್ರ ಅರ್ಥೈಸುವಿಕೆ, 2). ಪದ ಪ್ರಯೋಗ, 3) ವಿಷಯ ಸಂಕ್ಷೇಪಣೆ, 4). ಪದ ಜ್ಞಾನ, 5). ಇಂಗ್ಲೀಷ್‌ನಿಂದ ಕನ್ನಡಕ್ಕೆ ಭಾಷಾಂತರ | 150 | 150 | 3 ಗಂಟೆ |
| ಪತ್ರಿಕೆ-2 | **ಸಾಮಾನ್ಯ ಅಧ್ಯಯನ:-** 1). History and Cultural Heritage(India & Karnataka); 2). Social & Political Perspective, 3). Indian Economy, Planning, Rural Development, Data Collection Analysis Inerpretation, 4) Physical Features and Natural Resources, 5). Overview of Indian Constitution, 6). Public Administration & Management, International Relations, 7). Role and Impact of Science and Technology in Development of India, Information Technology in Public Domain, 8). Advancement and Modern Trends in Natural Science, Life Science, Agriculture Science, Health and Hygiene, 9). Challenges and Issues of Development on Environment and Ecology, 10). Ethics, 11). Integrity, 12). Aptitude. | 150 | 150 | 3 ಗಂಟೆ |
| ಪತ್ರಿಕೆ-3 | ಕರ್ನಾಟಕ ನಾಗರಿಕ ಸೇವಾ ನಿಯಮಗಳು, ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957, ಕರ್ನಾಟಕ ಹಣಕಾಸು ಸಂಹಿತೆ, ಕರ್ನಾಟಕ ಖಜಾನೆ ಸಂಹಿತೆ, ಆಕಸ್ಮಿಕ ವೆಚ್ಚದ ಕೈಪಿಡಿ, ಕರ್ನಾಟಕ ಶಿಕ್ಷಣ ಕಾಯ್ದೆ, 1983, ಹದಿಹರೆಯದ ಮನೋವಿಜ್ಞಾನ ಮತ್ತು ಆಡಳಿತಾತ್ಮಕ ಉದ್ದೇಶಗಳಿಗೆ ಅಗತ್ಯವಾದ ಇತರ ವಿಷಯಗಳು. | 150 | 150 | 3 ಗಂಟೆ |

**ಸೂಚನೆ:-** ಪತ್ರಿಕೆ-2 ರ ಪ್ರಶ್ನೆಪತ್ರಿಕೆಯ ವಿವರವಾದ ಪಠ್ಯಕ್ರಮವನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿರುತ್ತದೆ.

i. **ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆ-1 - ಕನ್ನಡ ಭಾಷಾ ಪತ್ರಿಕೆಯನ್ನು** ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು. ಈ ಪತ್ರಿಕೆಯ ಪಠ್ಯಕ್ರಮವು ಕರ್ನಾಟಕ ಗೆಜೆಟೆಡ್ ಪ್ರೊಬೇಷನರಿ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ) ನಿಯಮಗಳು 1997 ರಲ್ಲಿ ನಿರ್ದಿಷ್ಟಪಡಿಸಿದ ಮುಖ್ಯ ಪರೀಕ್ಷೆಯ ಪಠ್ಯಕ್ರಮದಂತೆಯೇ ಇದ್ದು, ಪ್ರಶ್ನೆಗಳು ಬಹು ಆಯ್ಕೆ ಮಾದರಿ ಪತ್ರಿಕೆಯಾಗಿರುತ್ತದೆ. **ಪ್ರಾಂಶುಪಾಲರ ಹುದ್ದೆಯ ಆಯ್ಕೆಗೆ ಅರ್ಹತೆ ಪಡೆಯಲು ಅಭ್ಯರ್ಥಿಯು ಕನಿಷ್ಠ 50 ಅಂಕಗಳನ್ನು ಪಡೆಯಬೇಕು. ಆದಾಗ್ಯೂ, ಕನ್ನಡ ಭಾಷಾ ಪತ್ರಿಕೆಯಲ್ಲಿ ಪಡೆದ ಅಂಕಗಳನ್ನು ಮೆರಿಟ್ ಪಟ್ಟಿಯ ತಯಾರಿಕೆಗೆ ಪರಿಗಣಿಸಲಾಗುವುದಿಲ್ಲ ಮತ್ತು ಅದು ಅರ್ಹತಾ ಸ್ವರೂಪಕ್ಕೆ ಮಾತ್ರ ಸೀಮಿತವಾಗಿರುತ್ತದೆ.**

For more job news visit : www.kpscvaani.com

ii. **ಪ್ರಶ್ನೆ ಪತ್ರಿಕೆ-2** ಸಾಮಾನ್ಯ ಅಧ್ಯಯನ ಪತ್ರಿಕೆಯು ಈ ಪತ್ರಿಕೆಯ ಪಠ್ಯಕ್ರಮವು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ) ನಿಯಮಗಳು, 1997 ರಲ್ಲಿ ನಿರ್ದಿಷ್ಟಪಡಿಸಿದ ಮುಖ್ಯ ಪರೀಕ್ಷೆಗಳ ಪಠ್ಯಕ್ರಮದಂತೆಯೇ ಇರುತ್ತದೆ. ಪ್ರಶ್ನೆಗಳು ಬಹು ಆಯ್ಕೆಯ ಪ್ರಕಾರದ್ದಾಗಿರುತ್ತವೆ.

iii. **ಪ್ರಶ್ನೆ ಪತ್ರಿಕೆ-3** ಪ್ರಶ್ನೆಗಳು ಬಹು ಆಯ್ಕೆಯ ಪ್ರಕಾರದ್ದಾಗಿರುತ್ತವೆ.

iv. **ಪತ್ರಿಕೆ-2 ಮತ್ತು ಪತ್ರಿಕೆ-3 ರ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಮಾತ್ರ ಮೆರಿಟ್ ಪಟ್ಟಿಯ ತಯಾರಿಕೆಗೆ ಪರಿಗಣಿಸಲಾಗುವುದು.**

**11. ಋಣಾತ್ಮಕ ಮೌಲ್ಯಮಾಪನ(Negative Valuation):**

i. ಪತ್ರಿಕೆ-2 ಮತ್ತು ಪತ್ರಿಕೆ-3 ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲಿಷ್ ಆವೃತ್ತಿಗಳಲ್ಲಿ ಇದ್ದು, ಉಪನ್ಯಾಸಕರು ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಪತ್ರಿಕೆಗಳಿಗೆ ಉತ್ತರಿಸಬಹುದು.

ii. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ, ಆ ಪ್ರಶ್ನೆಗೆ ನಿಗದಿಪಡಿಸಿರುವ ಅಂಕಗಳ ನಾಲ್ಕನೇ ಒಂದು ಭಾಗದಷ್ಟು (0.25) ಅಂಕಗಳನ್ನು ಕಳೆಯಲಾಗುವುದು.

iii. ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ / ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ ನಾಲ್ಕನೇ ಒಂದು ಭಾಗದಷ್ಟು (0.25) ಅಂಕಗಳನ್ನು ಕಡಿತಗೊಳಿಸಲಾಗುತ್ತದೆ..

**12. ಆಯ್ಕೆ ವಿಧಾನ:**

i. ಉಪನ್ಯಾಸಕರುಗಳು ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ-2 ಮತ್ತು ಪತ್ರಿಕೆ-3 ರಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮತ್ತು ಹುದ್ದೆಗಳ ನೇಮಕಾತಿಯಲ್ಲಿ ಮೀಸಲಾತಿಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಜಾರಿಯಲ್ಲಿರುವ ಸರ್ಕಾರದ ಆದೇಶಗಳಿಗೆ ಒಳಪಟ್ಟು, ಉಪನ್ಯಾಸಕರುಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ದಾಖಲಾತಿಗಳಂತೆ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:2 ರ ಅನುಪಾತದಲ್ಲಿ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಉಪನ್ಯಾಸಕರ ಪಟ್ಟಿಯನ್ನು ಪ್ರಕಟಿಸಿ, ಉಪನ್ಯಾಸಕರ ಮೂಲ ದಾಖಲಾತಿ / ಪ್ರಮಾಣ ಪತ್ರಗಳನ್ನು ಪರಿಶೀಲಿಸಿದ ನಂತರದಲ್ಲಿ, ಉಪನ್ಯಾಸಕರು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಮೆರಿಟ್, ಹುದ್ದೆಗೆ ಅನ್ವಯಿಸುವ ಅರ್ಹತೆಯಂತೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳಿಗೆ 1:1 ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗುವುದು. ತದನಂತರದಲ್ಲಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಹಾಗೂ ಪ್ರಕಟಿಸಿ, ಅಂತಿಮ ಆಯ್ಕೆ ಪಟ್ಟಿಯನ್ನು ಮುಂದಿನ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸಲಾಗುವುದು.

ii. ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಇಬ್ಬರು ಅಥವಾ ಹೆಚ್ಚಿನ ಉಪನ್ಯಾಸಕರುಗಳು ಸಮಾನ ಅಂಕಗಳನ್ನು ಪಡೆದರೆ, ಅಂತಹ ಉಪನ್ಯಾಸಕರುಗಳ ಅರ್ಹತೆಯ ಕ್ರಮವನ್ನು ಅವರ ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು, ವಯಸ್ಸಿನಲ್ಲಿ ಹಿರಿಯನಾದ ಉಪನ್ಯಾಸಕರನ್ನು ಅರ್ಹತಾ ಕ್ರಮದಲ್ಲಿ ಮೇಲಿನ ಸ್ಥಾನದಲ್ಲಿಡಲಾಗುವುದು.

iii. ಆಯ್ಕೆ ಪಟ್ಟಿಯಲ್ಲಿನ ಉಪನ್ಯಾಸಕರುಗಳನ್ನು ಕರ್ನಾಟಕ ನಾಗರಿಕ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಬಂಧನೆಗಳಿಗೆ ಅನುಸಾರವಾಗಿ ಪ್ರತಿಯೊಬ್ಬ ಉಪನ್ಯಾಸಕರ ಸೂಕ್ತತೆ ಮತ್ತು ದೇಹದಾರ್ಢ್ಯತೆ ಬಗ್ಗೆ ಪರಿಶೀಲಿಸಿದ ನಂತರ, ನೇಮಕಾತಿ ಪ್ರಾಧಿಕಾರವು ಆಯ್ಕೆ ಪಟ್ಟಿಯಲ್ಲಿನ ಉಪನ್ಯಾಸಕರುಗಳ ಅರ್ಹತಾ ಕ್ರಮದಲ್ಲಿ ನೇಮಕ ಮಾಡಲಾಗುವುದು.

iv. ಆಯ್ಕೆ ಪ್ರಾಧಿಕಾರವು ಸೂಚಿಸಲಾದ ಖಾಲಿ ಹುದ್ದೆಗಳ 20% ಮೀರದಷ್ಟು ಹೆಚ್ಚುವರಿ ಪಟ್ಟಿಯನ್ನು ಸಹ ಸಿದ್ಧಪಡಿಸಲಾಗುವುದು. ಆಯ್ಕೆ ಪಟ್ಟಿಯಲ್ಲಿ ಅಥವಾ ಪ್ರಕಟಿಸಿದ ಹೆಚ್ಚುವರಿ ಪಟ್ಟಿಯಲ್ಲಿನ ಉಪನ್ಯಾಸಕರುಗಳ ಹೆಸರನ್ನು ಸೇರಿಸುವುದರಿಂದ ಉಪನ್ಯಾಸಕರಿಗೆ ಯಾವುದೇ ನೇಮಕಾತಿ ಹಕ್ಕು ದೊರೆಯುವುದಿಲ್ಲ. ಹೆಚ್ಚುವರಿ ಪಟ್ಟಿಯು ಕರ್ನಾಟಕ ನಾಗರಿಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ), ನಿಯಮಗಳು, 2021 ರಲ್ಲಿ ಸೂಚಿಸಿದಂತೆ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ ಅಥವಾ ಎಲ್ಲಾ ಅಧಿಸೂಚಿತ ಖಾಲಿ ಹುದ್ದೆಗಳನ್ನು

For more job news visit : www.kpscvaani.com

ಭರ್ತಿ ಮಾಡುವವರೆಗೆ, ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ. ಹೆಚ್ಚುವರಿ ಪಟ್ಟಿಯಲ್ಲಿನ ಉಪನ್ಯಾಸಕರುಗಳನ್ನು ನೇಮಕಾತಿ ಪ್ರಾಧಿಕಾರವು ಆಯ್ಕೆ ಪಟ್ಟಿಯಲ್ಲಿ ಭರ್ತಿ ಮಾಡದ ಖಾಲಿ ಹುದ್ದೆಗಳ ಮಟ್ಟಿಗೆ ಮಾತ್ರ ನೇಮಕ ಮಾಡಲಾಗುವುದು.

**13. ಅರ್ಹತಾ ಷರತ್ತುಗಳು:**

i. **ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 10 ವರ್ಷಗಳಿಗಿಂತ ಕಡಿಮೆ ಇಲ್ಲದ ಸೇವೆಯನ್ನು ಪೂರೈಸಿರುವ ಅರ್ಹ ಉಪನ್ಯಾಸಕರುಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುತ್ತಾರೆ;**

ii. **ಕಾರ್ಯನಿರತ ಉಪನ್ಯಾಸಕರುಗಳು ಉಪನ್ಯಾಸಕರ ಹುದ್ದೆಯ ಖಾಯಂ ಪೂರ್ವಾವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸಿರಬೇಕು;**

iii. **ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಹಾಗೂ ಕಾಲಕಾಲಕ್ಕೆ ಆಗುವ ತಿದ್ದುಪಡಿ ನಿಯಮಗಳಂತೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 9 ಸೇವನೆ 2026, ದಿನಾಂಕ: 06.03.2026 ರಂತೆ ದಿನಾಂಕ: 31.12.2026 ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಉತ್ತೀರ್ಣರಾಗಬೇಕು.**

iv. **ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದಂದು ಕಾರ್ಯನಿರತ ಉಪನ್ಯಾಸಕರ ಮೇಲೆ ಯಾವುದೇ ಕ್ರಿಮಿನಲ್ ಮೊಕದ್ದಮೆ ಹಾಗೂ ಇಲಾಖಾ ವಿಚಾರಣೆ ಬಾಕಿ ಇರಬಾರದು ಹಾಗೂ ದಂಡನಾವಧಿಯಲ್ಲಿ ಇರತಕ್ಕದ್ದಲ್ಲ;**

v. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

vi. ದೈಹಿಕ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.**

**14. ಸೇವಾ ಪ್ರಮಾಣ ಪತ್ರ:**

ಕಾರ್ಯನಿರತ ಉಪನ್ಯಾಸಕರುಗಳು ಅರ್ಜಿ ಸಲ್ಲಿಸುವ ಮೊದಲು ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ ಅನುಬಂಧದಲ್ಲಿರುವಂತೆ "**ಸೇವಾ ಪ್ರಮಾಣ ಪತ್ರ**" ವನ್ನು ಪಡೆದಿಟ್ಟುಕೊಂಡು **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

**15. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಕೋರಿ ಬಯಸುವ ಉಪನ್ಯಾಸಕರುಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ (RD ಸಂಖ್ಯೆ ಇರುವ ಪ್ರಮಾಣ ಪತ್ರ ಹೊಂದಿರತಕ್ಕದ್ದು) ಪಡೆದಿಟ್ಟುಕೊಂಡು, ಆನ್‌ಲೈನ್ **ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಯು ಸರಿಯಾದ RD ಸಂಖ್ಯೆಯನ್ನು ನಮೂದಿಸಿ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

1. ಪರಿಶಿಷ್ಟ ಜಾತಿ (**ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಪ್ರಮಾಣ ಪತ್ರವನ್ನು ಪಡೆದು, ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆಯನ್ನು ನಮೂದಿಸತಕ್ಕದ್ದು**) ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಡಿ'**;
2. ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಇ'**;

For more job news visit : www.kpscvaani.com

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ **RD ಸಂಖ್ಯೆ ಇರುವ ಪ್ರಮಾಣ ಪತ್ರ ಹೊಂದಿರತಕ್ಕದ್ದು**.

3. ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು - ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30.03.2002 ರಂತೆ ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರ **"ನಮೂನೆ-ಹೆಚ್"** ರಲ್ಲಿ ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು.** ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡಿರುವ ನಮೂನೆ-ಹೆಚ್ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು (ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ). ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**ವಿಶೇಷ ಸೂಚನೆ**:- ಸರ್ಕಾರದ ಆದೇಶ ಸಂಖ್ಯೆ: ಸಕಇ 179 ಬಿಸಿಎ 2010, ದಿನಾಂಕ: 16.07.2011 ರಲ್ಲಿ ತಿಳಿಸಿರುವಂತೆ, ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎಂ 2000, ದಿನಾಂಕ: 30.03.2002 ಕ್ರಮ ಸಂಖ್ಯೆ: 3 (ಎ ಯಿಂದ ಎಮ್ ವರೆಗೆ) ಪ್ರವರ್ಗ 3ಎ ದಲ್ಲಿರುವ ಸದರಿ "ಬಲಿಜ" ಮತ್ತು ಉಪ ಜಾತಿಗಳಾದ ಬಲಜಿಗ / ಬಣಜಿಗ / ಗೌಡಬಣಜಿಗ, ನಾಯ್ಡು, ತೆಲಗ ಬಲಿಜ / ತೆಲಗ ಬಣಜಿಗ / ಶೆಟ್ಟಿ ಬಲಿಜ, ಶೆಟ್ಟಿ ಬಣಜಿಗ / ಬಣಜಿಗ ಶೆಟ್ಟಿ, ದಾಸರ ಬಲಿಜ / ದಾಸರ ಬಲಜಿಗ / ದಾಸರ ಬಣಜಿಗ / ದಾಸಬಣಜಿಗ, ಕಸ್ಬನ್, ಮುನ್ನೂರ / ಮುನ್ನಾರ್ / ಮುನ್ನೂಕಾಪು, ಬಳಿಗಾರ / ಬಳೆ ಬಣಜಿಗ / ಬಳೆಬಲಜಿಗ / ಬಳಿ ಜೆಟ್ಟಿ / ಬಣಗಾರ, ರೆಡ್ಡಿ(ಬಲಿಜ), ಜನಪ್ಪನ್, ಉಪ್ಪಾರ(ಬಲಿಜ), ತುಲೇರು(ಬಲಿಜ) ಜನಾಂಗವನ್ನು ಸಂವಿಧಾನದ ಅನುಚ್ಛೇಧ 15(4) ಶಿಕ್ಷಣ ಸಲುವಾಗಿ ಮಾತ್ರ ಮೀಸಲಾತಿ ಪಡೆಯಲು ಮೇಲ್ಕಂಡ ಆದೇಶ ದಿನಾಂಕ 30.03.2002 ರ ಪಟ್ಟಿಯಲ್ಲಿ ಪ್ರವರ್ಗ-3(ಎ) ಯಿಂದ ಪ್ರವರ್ಗ-2(ಎ) ಗೆ ಸೇರಿಸಲಾಗಿದೆ. ಆದರೆ ಅನುಚ್ಛೇಧ 16(4) ಉದ್ಯೋಗದ ಸಲುವಾಗಿ ಈಗಿರುವಂತೆ ಪ್ರವರ್ಗ-3(ಎ) ದಲ್ಲಿ ಮೀಸಲಾತಿ ಪಡೆಯಲು ಬಲಿಜ ಮತ್ತು ಅದರ ಉಪಜಾತಿಗಳನ್ನು ಮುಂದುವರೆಸಲಾಗಿದೆ. **ಆದ್ದರಿಂದ ಸದರಿ ಆದೇಶದನುಸಾರ ಸದರಿ ಜಾತಿ / ಉಪಜಾತಿಯ ಉಪನ್ಯಾಸಕರುಗಳು ಕಡ್ಡಾಯವಾಗಿ 3(ಎ) ಮೀಸಲಾತಿ ಕೋರತಕ್ಕದ್ದು ಹಾಗೂ 2(ಎ) ಮೀಸಲಾತಿ ಕೋರಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.**

**16. ಮಾಜಿ ಸೈನಿಕ:**

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977 ರನ್ವಯ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಎಂದು ಅರ್ಥ. ಆದರೆ ರಕ್ಷಣಾ ಭದ್ರತಾ ದಳ, ಸಾಮಾನ್ಯ ಮೀಸಲು ಇಂಜಿನಿಯರಿಂಗ್ ಪಡೆ, ಲೋಕ ಸಹಾಯಕ ಸೇನಾ ಮತ್ತು ಅರೆ ಮಿಲಿಟರಿ ಪಡೆಗಳಲ್ಲಿ ಸೇವೆ ಸಲ್ಲಿಸಿರುವ ವ್ಯಕ್ತಿಯನ್ನು; ಮತ್ತು

ಎ). ನಿವೃತ್ತಿ ವೇತನವನ್ನು ಗಳಿಸಿದ ತರುವಾಯ ಅಂಥ ಸೇವೆಯಿಂದ ನಿವೃತ್ತನಾಗುವ ವ್ಯಕ್ತಿಯನ್ನು;

ಅಥವಾ

ಬಿ).ಸೈನಿಕ ಸೇವೆಯಿಂದ ಉಂಟಾದ ವೈದ್ಯಕೀಯ ಕಾರಣಗಳು ಅಥವಾ ಆತನ ನಿಯಂತ್ರಣ ಮೀರಿದ ಪರಿಸ್ಥಿತಿಗಳ ಮೇಲೆ ಅಂಥ ಸೇವೆಯಿಂದ ಬಿಡುಗಡೆ ಮಾಡಿರುವ ಮತ್ತು ವೈದ್ಯಕೀಯ ಅಥವಾ ಇತರ ಅಸಮರ್ಥತಾ ನಿವೃತ್ತಿ ವೇತನವನ್ನು ನೀಡಲಾಗಿರುವ ವ್ಯಕ್ತಿಯನ್ನು;

ಅಥವಾ

For more job news visit : www.kpscvaani.com

ಸಿ). ಆತನ ವೈಯಕ್ತಿಕ ಕೋರಿಕೆಯ ಮೇಲಲ್ಲದೆ ಸಿಬ್ಬಂದಿ ಸಂಖ್ಯೆಯ ಕಡಿತದ ಪ್ರತಿಫಲವಾಗಿ ಅಂಥ ಸೇವೆಯಿಂದ ಆತನನ್ನು ಬಿಡುಗಡೆಗೊಳಿಸಿರುವ ವ್ಯಕ್ತಿಯನ್ನು;

ಅಥವಾ

ಡಿ). ಆತನ ವೈಯಕ್ತಿಕ ಕೋರಿಕೆ ಮೇಲಲ್ಲದೇ ಅಥವಾ ದುರ್ವರ್ತನೆ ಅಥವಾ ಅದಕ್ಷತೆಯ ಕಾರಣದಿಂದ ವಜಾಗೊಳಿಸುವ ಅಥವಾ ತೆಗೆದುಹಾಕುವ ಮೂಲಕವಲ್ಲದೆ ಅನ್ಯಥಾ ನಿಯೋಜಿಸಲಾದ ನಿರ್ದಿಷ್ಟ ಅವಧಿ ಮುಕ್ತಾಯವಾದ ತರುವಾಯ ಅಂಥ ಸೇವೆಯಿಂದ ಬಿಡುಗಡೆಗೊಳಿಸಿರುವ ಮತ್ತು ಉಪದಾನ ನೀಡಿರುವ ವ್ಯಕ್ತಿಯನ್ನು - ಒಳಗೊಳ್ಳುವುದಿಲ್ಲ

ಮತ್ತು ಪ್ರಾದೇಶಿಕ ಸೇವೆಯ ಮುಂದಿನ ಪ್ರವರ್ಗಗಳ ಸಿಬ್ಬಂದಿಯನ್ನು ಎಂದರೆ,

i. ನಿರಂತರ ಸಂಚಿತ ಸೇವೆಗೆ ಸಂಬಂಧಿಸಿದ ನಿವೃತ್ತಿ ವೇತನದಾರರನ್ನು;
ii. ಸೈನಿಕ ಸೇವೆಯ ಕಾರಣಗಳಿಂದ ಅಂಗವಿಕಲರಾದ ವ್ಯಕ್ತಿಗಳನ್ನು ಮತ್ತು
iii. ಶೌರ್ಯ ಪ್ರಶಸ್ತಿ ವಿಜೇತರನ್ನು - ಒಳಗೊಳ್ಳುತ್ತದೆ.

2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ.

ಸೂಚನೆ: ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಮರಣ ಹೊಂದಿದ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದುಕೊಂಡು (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ) ಅಥವಾ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಮಾಜಿ ಸೈನಿಕ ಮೀಸಲಾತಿ ರಡಿಯಲ್ಲಿ ಆಯ್ಕೆಗೊಂಡು ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳು ಸಂಬಂಧಪಟ್ಟ ದಾಖಲೆಗಳನ್ನು **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

**17. ಗ್ರಾಮೀಣ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001, ದಿನಾಂಕ: 13.02.2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ **ಅಪ್‌ಲೋಡ್ ಮಾಡತಕ್ಕದ್ದು**, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಹಾಗೂ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡಿದ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ಲಂಬ ಮೀಸಲಾತಿ (vertical reservation) ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ). (ಈ ಪ್ರಮಾಣಪತ್ರಗಳ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕ 13-02-2001 ರನ್ವಯ ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಜನರಲ್

For more job news visit : www.kpscvaani.com

ಮೆರಿಟ್ ಅಭ್ಯರ್ಥಿಗಳು, ಮೇಲುಸ್ತರದ ಪರಿಕಲ್ಪನೆಯ ವ್ಯಾಪ್ತಿಯಲ್ಲಿ ಬಾರದ ಅಭ್ಯರ್ಥಿಗಳು ಮಾತ್ರ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಅಧಿಕೃತ ಅಧಿಕಾರಿಯಿಂದ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಪಡೆದು, ಗ್ರಾಮೀಣ ಮೀಸಲಾತಿಯನ್ನು ಕೋರಲು ಅವಕಾಶವಿರುತ್ತದೆ.

**18. ನಮೂನೆ-ಹೆಚ್:**

ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30.03.2022 ರ ಅನುಬಂಧ-II ಹೊಸ ಕೆನೆಪದರ ರಂತೆ ಸೇವೆಯಲ್ಲಿರುವ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳು ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರವನ್ನು ನಮೂನೆ-ಹೆಚ್ ರಲ್ಲಿ ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**19. ಕನ್ನಡ ಮಾಧ್ಯಮ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೆನನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

**20. ವಿಶೇಷ ಚೇತನ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/149/ಎಸ್‌ಆರ್‌ಆರ್/2020, ದಿನಾಂಕ: 25.09.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಶೇ.4 ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿದ್ದು, ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೆನನಿ/2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರ/ UDID ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು ಹಾಗೂ ನೇಮಕಾತಿ ಪ್ರಾಧಿಕಾರಗಳು ತಿಳಿಸುವ ವೈದ್ಯಕೀಯ ಮಂಡಳಿ ಪರಿಶೀಲನೆಗೆ ಹಾಜರಾಗಿ ನಿಯಮಾನುಸಾರ ಅರ್ಹತೆಗಳಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಶೇಷ ಚೇತನ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**21. ತೃತೀಯ ಲಿಂಗದ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸೇನನಿ 2020 ದಿನಾಂಕ: 06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ' ಮತ್ತು 'ಡಿ 'ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರ ಹಿಂದುಳಿದ ವರ್ಗಗಳ

For more job news visit : www.kpscvaani.com

ಪ್ರತಿಯೊಂದು ಪ್ರವರ್ಗದಿಂದ ಶೇಕಡ 1 (ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**22. ಭಾರತೀಯ ಸಂವಿಧಾನ ಅನುಚ್ಛೇಧ 371(ಜೆ) ರಂತೆ ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ದಿನಾಂಕ: 29.01.2014 ರಂದು ಹೊರಡಿಸಲಾದ ಅಧಿಸೂಚನೆ-1 ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ-ಎ ನಲ್ಲಿ ಇರುವಂತೆ ದಿನಾಂಕ: 01.01.2013 ಕ್ಕಿಂತ ಮುಂಚೆ ತಮ್ಮ ಸೇವಾ ಪುಸ್ತಕದಲ್ಲಿ ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶದ ಸ್ಥಳ ನಮೂದಾಗಿದ್ದಲ್ಲಿ, ಸ್ವಗ್ರಾಮ ಪ್ರಮಾಣ ಪತ್ರವನ್ನು ಕಛೇರಿ ಮುಖ್ಯಸ್ಥರಿಂದ ಪಡೆದು ಅರ್ಜಿಯಲ್ಲಿ **ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸದರಿ ಮೀಸಲಾತಿಯಡಿ ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ-ಎ ಯಲ್ಲಿರುವ ನಮೂನೆಯಲ್ಲಿಯೇ (RD ಸಂಖ್ಯೆ ಇರುವ) ಅರ್ಹತಾ ಪ್ರಮಾಣಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಂಡು ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆ ನಮೂದಿಸಿ **ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸದರಿ ಮೀಸಲಾತಿಯಡಿ ಪರಿಗಣಿಸಲಾಗುವುದಿಲ್ಲ.

**23. ಪ್ರಾಧಿಕಾರದೊಡನೆ ಪತ್ರ ವ್ಯವಹಾರ;**

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ ಮತ್ತು ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

**24. ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB) ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್ನಿನಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು.

For more job news visit : www.kpscvaani.com

ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಕಲ್ಯಾಣ-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ / ಅಪ್‌ಲೋಡ್ ಮಾಡಬೇಕಾದ ಪ್ರಮಾಣಪತ್ರಗಳು.

1. ಆಧಾರ್‌ಕಾರ್ಡ್
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disbaled) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
4. ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ), ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ RD ಸಂಖ್ಯೆ ಇರುವ ನಿಗದಿತ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5. ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಹೆಚ್ (ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರ) (ಮೀಸಲಾತಿ ಕೋರಿದ್ದಲ್ಲಿ)
6. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆಗೆ ಸೇರಿದ ಆದರೆ ಮೇಲುಸ್ತರದ ಪರಿಕಲ್ಪನೆಯ ವ್ಯಾಪ್ತಿಯಲ್ಲಿ ಬಾರದ ಅಭ್ಯರ್ಥಿಗಳು ಸಂಬಂಧಪಟ್ಟ ನಮೂನೆಯಲ್ಲಿ) ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
7. ಸೇವಾ ಪ್ರಮಾಣ ಪತ್ರ
8. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9. ಭಾರತೀಯ ಸಂವಿಧಾನ ಅನುಚ್ಛೇಧ 371(ಜೆ) ರಂತೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಯೆಂದು ಸಕ್ಷಮ ಪ್ರಾಧಕಾರದಿಂದ ಪಡೆದ ಪ್ರಮಾಣ ಪತ್ರಗಳು
10. ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದ ತೃತೀಯ ಲಿಂಗದ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)

**25. ವಿಶೇಷ ಸೂಚನೆಗಳು:**

I. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.

For more job news visit : www.kpscvaani.com

II. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

III. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್‌ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

IV. ಅಭ್ಯರ್ಥಿಯು ಸಲ್ಲಿಸುವ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

V. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ ಸೂಚನೆಗಳನ್ನು/ ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

VI. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

VII. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

**26. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: ಮಾಹಿತಿ ಕೇಂದ್ರ - 080-23460460. (10.00 AM to 6.00 PM)

**27. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವರೆಂದು, ಕಂಡುಬಂದಲ್ಲಿ ಅವರು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಗಮನಿಸಿ**:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್‌ಆರ್‌ಆರ್ 2020, ದಿನಾಂಕ: 25.09.2020, ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 2 ಸೆಹಿಮ 2023, ದಿನಾಂಕ: 08.03.2023, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿಗಳು ಮತ್ತು ಕರ್ನಾಟಕ ಸಾಮಾನ್ಯ ಸೇವೆಗಳು(ಪದವಿ ಪೂರ್ವ ಶಿಕ್ಷಣ) (ನೇಮಕಾತಿ) ನಿಯಮಗಳು ಮತ್ತು ಅದರ ತಿದ್ದುಪಡಿ ನಿಯಮಗಳು ಅನ್ವಯವಾಗುತ್ತವೆ.

For more job news visit : www.kpscvaani.com

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ. | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ.<br>(ಪ್ರ-ಎ)<br>(ಪ್ರ-ಬಿ)<br>(ಪ್ರ-ಸಿ) | ಪರಿಶಿಷ್ಟ ಜಾತಿ<br>(ಪ್ರವರ್ಗ-ಎ)<br>(ಪ್ರವರ್ಗ-ಬಿ)<br>(ಪ್ರವರ್ಗ-ಸಿ) | SC<br>(Cat-A)<br>(Cat -B)<br>(Cat -C) | Scheduled Caste<br>(Category -A)<br>(Category -B)<br>(Category -C) |
| ಪ.ಪಂ. | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ-1 | ಪ್ರವರ್ಗ-1 | Cat–1 | Category–1 |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ. | ಮಾಜಿ ಸೈನಿಕ | XMP | Ex- Service Men<br>(Ex-Military person) |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ. | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಮ.ಅ | ಮಹಿಳಾ ಅಭ್ಯರ್ಥಿ | Wom | Woman Candidate |
| ತೃ.ಲಿ. | ತೃತೀಯ ಲಿಂಗಿ | TG | Transgender |
| ಕ.ಕ. | ಕಲ್ಯಾಣ-ಕರ್ನಾಟಕ | KK | Kalyana-Karnataka |

**ಕಾರ್ಯನಿರ್ವಾಹಕ ನಿರ್ದೇಶಕರು,**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಸೂಚನೆ**: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.

For more job news visit : www.kpscvaani.com

[illegible]

- ಇಲಾಖೆಯಹೆಸರು:ಶಾಲಾಶಿಕ್ಷಣಇಲಾಖೆ (ಪದವಿಪೂರ್ವ)
- ಹುದ್ದೆ: ಪ್ರಾಂಶುಪಾಲರು
- ವೇತನಶ್ರೇಣಿ: 90200-159200

## ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ

| ಕ್ರ. ಸಂ | ಮೀಸಲಾತಿ ವರ್ಗ | ಇತರೆ ಅಭ್ಯರ್ಥಿ | ಮಹಿಳೆ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| 1 | ಪ.ಜಾತಿ-ಎ | 1 | 1 | - | - | - | - | - | 2 |
| 2 | ಪ.ಜಾತಿ-ಬಿ | 1 | 1 | - | - | - | - | - | 2 |
| 3 | ಪ.ಜಾತಿ-ಸಿ | 1 | - | - | - | - | - | - | 1 |
| 4 | ಪ.ಪಂ | 1 | 0 | - | - | - | - | - | 1 |
| 5 | ಪ್ರವರ್ಗ-1 | 1 | 1 | - | - | - | - | - | 2 |
| 6 | ಪ್ರವರ್ಗ-2ಎ | 1 | 2 | 1 | - | - | 1* | - | 5 |
| 7 | ಪ್ರವರ್ಗ-2ಬಿ | 1 | - | - | - | - | - | - | 1 |
| 8 | ಪ್ರವರ್ಗ-3ಎ | 1 | - | - | - | - | - | - | 1 |
| 9 | ಪ್ರವರ್ಗ-3ಬಿ | 1 | - | - | - | - | - | - | 1 |
| 10 | ಸಾಮಾನ್ಯ | 2 | 6 | 4 | 1 | 1 | 1* | - | 15 |
| | ಒಟ್ಟು | 11 | 11 | 5 | 1 | 1 | 2* | - | 31 |

ಷರಾ:-

1. # - ಪರಿಶಿಷ್ಟ ಜಾತಿ ಪ್ರವರ್ಗ-ಸಿಯಲ್ಲಿನ 01 ಇತರೆ ಗುಂಪಿನ ಹುದ್ದೆಯನ್ನು ಪರಿಶಿಷ್ಟ ಜಾತಿಯ ಪ್ರವರ್ಗ-ಸಿಯಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸುವುದು. ಒಂದು ವೇಳೆ, ಈ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದಿದ್ದಲ್ಲಿ, ಈ ಹುದ್ದೆಗಳನ್ನು ಪ್ರವರ್ಗ "ಸಿ"ಯ ಇತರೆ ಜಾತಿಗಳ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡುವುದು.
2. ಅಂಗವಿಕಲತೆಯ ಸ್ವರೂಪ:-

   * - (Blindness and low vision).

   ** – (Locomotor disability including cerebral palsy, leprosy cured, dwarfism, acid attack victims and muscular dystrophy),

   *** – (Deaf and Hard of hearing)

   **** – (Autism, intellectual disability, specific learning disability and menta illness) (Multiple disabilities from amongst persons under clauses (a) to (d) including deaf blindness in the posts identified for each disabilities.

(ವಿ. ರಶ್ಮಿಮಹೇಶ್)
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ,
ಹಾಗೂ ನೇಮಕಾತಿ ಪ್ರಾಧಿಕಾರ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

For more job news visit : www.kpscvaani.com

# ಸೇವಾ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ____________________________ ಉಪನ್ಯಾಸಕರು _______________ (ಬೋಧನಾ ವಿಷಯ) ________________ ಸರ್ಕಾರಿ ಪದವಿ ಪೂರ್ವ ಕಾಲೇಜು, ______________ ತಾಲ್ಲೂಕು ______________ ಜಿಲ್ಲೆ. _____________ ದಿನಾಂಕದಂದು ಸೇವೆಗೆ ಸೇರಿದ್ದು ____________ ದಿನಾಂಕಕ್ಕೆ ಪರೀಕ್ಷಾರ್ಥ ಅವಧಿ ಪೂರೈಸಿದ್ದಾರೆಂದು ಆದೇಶ ಸಂಖ್ಯೆ: ___________________________ ದಿನಾಂಕ ___________ ರಂದು ಘೋಷಿಸಲಾಗಿರುತ್ತದೆ ಎಂದು ಸೇವಾ ಪುಸ್ತಕದ ಪುಟ ಸಂಖ್ಯೆ ________ ರಲ್ಲಿ ನಮೂದಿಸಿ ದೃಢೀಕರಿಸಿರುತ್ತದೆ.

ಸಹಿ/

ಪ್ರಾಂಶುಪಾಲರು / ಕಛೇರಿ ಮುಖ್ಯಸ್ಥರು

_______________________

_______________________

For more job news visit : www.kpscvaani.com

## ನಮೂನೆ-ಹೆಚ್

**ಸೇವೆಯಲ್ಲಿರುವ ಮತ್ತು ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರ**

(ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002,
ಅನುಬಂಧ-II ಹೊಸ ಸಮಗ್ರ ಕೆನೆಪದರ)

---------------- ಗ್ರಾಮ --------------ಪಟ್ಟಣದ------------- ತಾಲ್ಲೂಕು------------ನಗರ-------------ಜಿಲ್ಲೆ ನಿವಾಸಿಯಾದ ಶ್ರೀ/ಶ್ರೀಮತಿ---------------------------------- ಇವರ ಮಗ/ಮಗಳು/ಪತ್ನಿ/ಪತಿಯಾದ, ಶ್ರೀ/ಶ್ರೀಮತಿ/ ಕುಮಾರಿ--------------- ------ವರು ಪ್ರವರ್ಗದ ---------------- ಜಾತಿಗೆ ಸೇರಿದ್ದು ----------- -- ಇಲಾಖೆಯಲ್ಲಿ -------------------- ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಸದರಿಯವರು ಪ್ರಸ್ತುತ ----------------- ಇಲಾಖೆಯಲ್ಲಿನ ------------ ------ ಹುದ್ದೆಗೆ ಅರ್ಜಿ ಸಲ್ಲಿಸುತ್ತಿದ್ದು ಈ ಸಂಬಂಧ ಅರ್ಜಿದಾರರು ನೀಡಿದ ದಾಖಲೆಗಳನ್ನು ಪರಿಶೀಲಿಸಿ ಪ್ರಮಾಣೀಕರಿಸಲಾಗಿದೆ. ಈ ಪ್ರಮಾಣ ಪತ್ರವನ್ನು ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002, ಅನುಬಂಧ-II ಹೊಸ ಸಮಗ್ರ ಕೆನೆಪದರದ ಆದೇಶದಂತೆ ಉದ್ಯೋಗದಲ್ಲಿ ಕೆನೆಪದರಕ್ಕೆ ವಿನಾಯಿತಿಯನ್ನು ಪಡೆಯಲು ಮಾತ್ರ ಪ್ರಮಾಣೀಕರಿಸಲಾಗಿದೆ.

ಸ್ಥಳ:

ತಹಶೀಲ್ದಾರ್

ದಿನಾಂಕ:

________________ ತಾಲ್ಲೂಕು

ಕಛೇರಿಯ ಮೊಹರು

For more job news visit : www.kpscvaani.com

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ (ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

........................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ........................................ ಜಿಲ್ಲೆಯ / ವಿಭಾಗದ ........................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ........................................ ಎಂಬುವವರ ಮಗ /ಮಗಳಾದ ಶ್ರೀ / ಶ್ರೀಮತಿ ........................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ /ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

◆ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

◆ಸಂವಿಧಾನ

◆ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

◆ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

◆ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

◆ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

◆ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತಜಾತಿ/ಬುಡಕಟ್ಟುಗಳ ಆದೇಶ 1988

◆ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ........................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ........................................ ಜಿಲ್ಲಾ / ವಿಭಾಗದ ........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ........................................

ತಹಶೀಲ್ದಾರ್........................................

ಪದನಾಮ

ಕಛೇರಿಯ ಮೊಹರಿನೊಂದಿಗೆ

ಸ್ಥಳ:

ದಿನಾಂಕ:

ರಾಜ್ಯ / ಕೇಂದ್ರಾಡಳಿತ ಪ್ರದೇಶ ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ:** ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ. ಭಾರತ ಸರ್ಕಾರದ ಪತ್ರಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

For more job news visit : www.kpscvaani.com

(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ (ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

______________________________ ಗ್ರಾಮ / ಪಟ್ಟಣದ /

ನಗರ ನಿವಾಸಿಯಾದ ಶ್ರೀ / ಶ್ರೀಮತಿ ______________________________

______________ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ

______________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ)

______________ ಜಾತಿಯ ______________ ಉಪ ಜಾತಿಗೆ

ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ತಹಶೀಲ್ದಾರ್

ದಿನಾಂಕ:

______________ ತಾಲ್ಲೂಕು

ಕಛೇರಿಯ ಮೊಹರು

For more job news visit : www.kpscvaani.com

GOVERNMENT OF KARNATAKA
DEPARTMENT OF SAINIK WELFARE AND RESETTLEMENT
Office of the Deputy Director
Department of Sainik Welfare & Resettlement
(Karnataka)

No. Date:

CERTIFICATE

This is to certify that Shri/Smt/Kum.............................................is an applicant for ...............................in Karnataka is the spouse / son / daughter of No..................... Rank........... Name ..................................................... who died / was permanently disabled while in service according to the certificate issued by Defense Authority. He died / was permanently disabled on .....................

Home address of the individual at the time of joining Defense Service as per the records is:

..................................................................

......................................................................

Place:
Date:

Signature of the Deputy Director
Department of Sainik Welfare & Resettlement

District ....................................

For more job news visit : www.kpscvaani.com

## ನಮೂನೆ – 2
## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿಗದಿಪಡಿಸಿ ಒಂದು ದೊಡ್ಡ ನಗರಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು ಸಹಿ

ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ:
ದಿನಾಂಕ:

---

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ / ಮಗಳು / ಪತಿ / ಪತ್ನಿ / ಶ್ರೀಮತಿ / ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ:

ಮುಖ್ಯೋಪಾಧ್ಯಯರ
ಸಹಿ ಮತ್ತು ಸಂಸ್ಥೆಯ ಮೊಹರು

For more job news visit : www.kpscvaani.com

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನಿ 2005, ದಿನಾಂಕ: 19.11.2005

# CERTIFICATE FOR THE PERSONS WITH DISABILITIES

This is to certify that Sri / Smt / Kum ............................................................. son / wife / daughter of Shri ............................................................... Age .............................. old, male / female, Registration No ................................ is a case of

............................ He / She is physically disabled/visual disabled/speech & hearing disabled and has ........................ % (......................percent) permanent (physical impairment visual impairment speech & hearing impairment) in relation to his / her ..................................

Note:

1. This condition is progressive / non-progressive / likely to improve / not likely to improve. *

2. Re-assessment is not recommended/is recommended after a period of .................... months / years. *

* Strike out which is not applicable

(Recent Attested Photograph showing the disability affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO / Head of Hospital (with seal)

Signature / Thumb impression
of the disabled person

Explanation:-As per Notification No. DPAR 149 SRR 2020 dated 25-09-2020 "Physically Handicapped candidates" or "person with disability" means a person suffering from not less than forty percent of any of the disabilities mentioned in the above said Governmetn rules.

For more job news visit : www.kpscvaani.com

(1) Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;

(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device;

(3) Hearing impairment means loss of sixty decibels or more in the better ear in the conversational range of frequencies.

(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.

(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & pares is in the eye & eyelid, but with no manifest deformity;(ii) manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly;

(6) Mental Retardation:-means a condition of arrested or incomplete development of mind of a person who is specially characterised by sub normality of intelligence;

(7) Mental Illness:- means any mental disorder other than mental retardation.

For more job news visit : www.kpscvaani.com

ಅನುಬಂಧ–ಎ
ಸ್ವಗ್ರಾಮ ಪ್ರಮಾಣ ಪತ್ರ
(ಅನುಚ್ಛೇಧ 371 (ಜೆ) ಮೇರೆಗೆ)

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದ್ರಾಬಾದ್ – ಕರ್ನಾಟಕ ಮೀಸಲಾತಿಗೆ ಸಲ್ಲಿಸಬೇಕಾದ ಪ್ರಮಾಣ ಪತ್ರದ ದಿನಾಂಕ 29–01–2014ರ ಅಧಿಸೂಚನೆ–1 ರಲ್ಲಿನ (5 (2) ನೇ ನಿಯಮ ನೋಡಿ)

(ಪ್ರಮಾಣ ಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ / ಶ್ರೀಮತಿ ______________________ ರವರು ______________________ ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ______________ ಜಿಲ್ಲೆಯ ______________________ ತಾಲ್ಲೂಕಿನ ______________ ಗ್ರಾಮ / ಪಟ್ಟಣವನ್ನು ತನ್ನ ಸೇವಾ ಪುಸ್ತಕದಲ್ಲಿ ತನ್ನ ಸ್ವಗ್ರಾಮ /ಸ್ಥಳ ಎಂದು ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01–01–2013 ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ಇತ್ತೆಂದು ಸ್ವತ: ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ: ______________________

ದಿನಾಂಕ: ______________________

ಹೆಸರು ______________________

ಪದನಾಮ ______________________

ಕಛೇರಿ ______________________

ಇಲಾಖೆ ______________________

For more job news visit : www.kpscvaani.com

ಅನುಬಂಧ–ಎ

**ಅರ್ಹತಾ ಪ್ರಮಾಣ ಪತ್ರ**

[ಅನುಚ್ಛೇಧ 371(ಜೆ)ಮೇರೆಗೆ]

[3(3)ನೇ ನಿಯಮ ನೋಡಿ]

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013]

ಶ್ರೀ / ಶ್ರೀಮತಿ ______________________ ರವರು ______________________ ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ______________ ಜಿಲ್ಲೆಯ ______________ ತಾಲ್ಲೂಕಿನ ______________________ ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: ________________

ದಿನಾಂಕ: ______________ ಹೆಸರು ______________________

ಅಸಿಸ್ಟೆಂಟ್ ಕಮಿಷನರ್

______________ ಉಪವಿಭಾಗ

______________ ಜಿಲ್ಲೆ

For more job news visit : www.kpscvaani.com

**ಕರ್ನಾಟಕ ಸರ್ಕಾರ**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**
**ಬೆಂಗಳೂರು**

**ಸಂಖ್ಯೆ:ಇಡಿ/ಕೆಇಎ/28/ನೇ.ವಿ./2026(ಆರ್‌ಪಿಸಿ)** **ದಿನಾಂಕ: 03.09.2026**

## ಅಧಿಸೂಚನೆ

ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಅಧೀನದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ **ಉಳಿದ ಮೂಲ ವೃಂದದಲ್ಲಿ** ಖಾಲಿಯಿರುವ **ಗ್ರೂಪ್-ಎ ವೃಂದದ ಪ್ರಾಂಶುಪಾಲರ** ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ **ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರತ ಅರ್ಹ ಉಪನ್ಯಾಸಕರುಗಳಿಂದ** ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಉಪನ್ಯಾಸಕರುಗಳು ಪ್ರಾಂಶುಪಾಲರ ಹುದ್ದೆಯ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

**ಪ್ರಾಂಶುಪಾಲರ ನೇರ ನೇಮಕಾತಿ ಕೋಟಾದ ಹುದ್ದೆಗಳ ವಿವರ;**

| ಹುದ್ದೆಯ ವಿವರ | ವೇತನ ಶ್ರೇಣಿ ರೂ.ಗಳಲ್ಲಿ | ಹುದ್ದೆಗಳ ಸಂಖ್ಯೆ |
|---|---|---|
| ಪ್ರಾಂಶುಪಾಲರು (ಉಳಿದ ಮೂಲ ವೃಂದ) | 90200-159200 | 216 |

**(ಗಮನಿಸಿ: ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಸರ್ಕಾರ / ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ನೀಡಿದಂತೆ ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).**

**1. ಶೈಕ್ಷಣಿಕ ಅರ್ಹತೆ:-**

| ಹುದ್ದೆ | ಶೈಕ್ಷಣಿಕ ಅರ್ಹತೆ |
|---|---|
| ಪ್ರಾಂಶುಪಾಲರು | ಶಾಲಾ ಶಿಕ್ಷಣ ಇಲಾಖೆಯ (ಸರ್ಕಾರಿ ಪದವಿ ಪೂರ್ವ ಕಾಲೇಜುಗಳ) ಉಪನ್ಯಾಸಕರ ವೃಂದದಲ್ಲಿ ಕನಿಷ್ಠ ಹತ್ತು ವರ್ಷಗಳ ಸೇವೆಯನ್ನು ಪೂರೈಸಿರಬೇಕು ಮತ್ತು ಖಾಯಂಪೂರ್ವ ಸೇವಾವಧಿಯನ್ನು ತೃಪ್ತಿಕರವಾಗಿ ಪೂರೈಸಿರಬೇಕು. |

ಟಿಪ್ಪಣಿ:-

a) ಮೇಲೆ ನಮೂದಿಸಿದಂತೆ ಶೈಕ್ಷಣಿಕ ಅರ್ಹತೆಯನ್ನು ಹೊಂದದೇ ಇರುವ ಉಪನ್ಯಾಸಕರುಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ಸರ್ಕಾರ / ಪ್ರಾಧಿಕಾರಕ್ಕೆ ಅಥವಾ ನೇಮಕಾತಿ ಸಮಿತಿಗೆ ಶೈಕ್ಷಣಿಕ ಅರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಉಪನ್ಯಾಸಕರುಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

b) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ಶೈಕ್ಷಣಿಕ ಅರ್ಹತೆಯನ್ನು ಹೊಂದಿರಬೇಕು.

**2. ವಯೋಮಿತಿ:-**

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ನೇರ ನೇಮಕಾತಿ ಕೋಟಾದ ಶೇ.100 ರಷ್ಟು ಪ್ರಾಂಶುಪಾಲರ ಹುದ್ದೆಗಳನ್ನು ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)(ಸರ್ಕಾರಿ ಪದವಿ ಪೂರ್ವ ಕಾಲೇಜು) ಯಲ್ಲಿ ವಿವಿಧ ವಿಷಯಗಳ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ, 10 ವರ್ಷಗಳ ಸೇವೆಯನ್ನು ಪೂರೈಸಿರುವ ಉಪನ್ಯಾಸಕರಿಂದ ಭರ್ತಿ ಮಾಡಲು ಅವಕಾಶ ಕಲ್ಪಿಸಿರುವುದರಿಂದ ವಯೋಮಿತಿಯ ಮಿತಿ ಇರುವುದಿಲ್ಲ.

**3. ಅರ್ಜಿ ಸಲ್ಲಿಸುವ ವಿಧಾನ:-**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್: https://cetonline.karnataka.gov.in/kea/ ನಲ್ಲಿ ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಉಪನ್ಯಾಸಕರುಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

For more job news visit : www.kpscvaani.com

**4. ಆನ್‌ಲೈನ್ ಅರ್ಜಿ ಸಲ್ಲಿಸಲು ವೇಳಾಪಟ್ಟಿ:**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **07.09.2026** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **04.10.2026** |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **05.10.2026** |

ಉಪನ್ಯಾಸಕರುಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಸಮಯದಲ್ಲಿ ಆದರೂ ಯಾವುದೇ ಮುನ್ಸೂಚನೆಯನ್ನು ನೀಡದೇ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಇಲಾಖೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

**5. ವೇತನ ಶ್ರೇಣಿ:**

2024 ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿ ಅನ್ವಯ - ರೂ. 90200-2300-99400-2700-115600-3100-134200-3500-155200-4000-159200 - ಅನ್ವಯವಾಗಲಿವೆ.

**6. ಪಿಂಚಣಿ ಸೌಲಭ್ಯ ಕುರಿತು:**

ಪ್ರಾಂಶುಪಾಲರ ಹುದ್ದೆಗೆ ನೇಮಕವಾಗುವ ಅಧಿಕಾರಿಗಳಿಗೆ ಅವರು ಉಪನ್ಯಾಸಕರಾಗಿ ಮೂಲ ನೇಮಕಾತಿ ಹೊಂದಿದ ಸಂದರ್ಭದಲ್ಲಿ ಅನ್ವಯವಾಗಿದ್ದ ಪಿಂಚಣಿ ನಿಯಮಗಳೇ ಅನ್ವಯವಾಗುವುದು.

**7. ಶುಲ್ಕ:**

ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| **ವಿವರಗಳು** | **ಶುಲ್ಕ** | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ.1500/- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ತೃತೀಯ ಲಿಂಗದ ಅಭ್ಯರ್ಥಿಗಳು | ರೂ.1000/- | |
| ವಿಶೇಷ ಚೇತನ ಅಭ್ಯರ್ಥಿಗಳಿಗೆ | ರೂ.500/- | |

**8. ಪರೀಕ್ಷಾ ದಿನಾಂಕ:**

| | |
|---|---|
| **ಪತ್ರಿಕೆ-1** | ಸ್ಪರ್ಧಾತ್ಮಕ ಪರೀಕ್ಷೆಗೆ ವಿವರವಾದ ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು. |
| **ಪತ್ರಿಕೆ-2** | |
| **ಪತ್ರಿಕೆ-3** | |

**9. ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:**

I. ಪ್ರಾಂಶುಪಾಲರ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು **ಆನ್‌ಲೈನ್(CBT)** ಅಥವಾ **ಆಫ್‌ಲೈನ್-ಓಎಂಆರ್ ಮಾದರಿ (Offline-OMR type)** ಯಲ್ಲಿ ನಡೆಸಲಾಗುವುದು.

II. ಪ್ರಶ್ನೆಗಳು ಬಹು ಆಯ್ಕೆ ಪ್ರಕಾರದ್ದಾಗಿರುತ್ತವೆ.

III. **ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುವ ಪರೀಕ್ಷಾ ಕೇಂದ್ರದ ವಿವರಗಳನ್ನು ನಂತರದಲ್ಲಿ ತಿಳಿಸಲಾಗುವುದು(ಆಡಳಿತಾತ್ಮಕ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ)** ಉಪನ್ಯಾಸಕರುಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಉಪನ್ಯಾಸಕರು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್ ಐಡಿ / ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.
**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ)**

For more job news visit : www.kpscvaani.com

**10. ಪ್ರಶ್ನೆಪತ್ರಿಕೆ ಮತ್ತು ಪಠ್ಯಕ್ರಮ:**

| ಪತ್ರಿಕೆ | ವಿಷಯ | ಒಟ್ಟು ಪ್ರಶ್ನೆಗಳು | ಗರಿಷ್ಠ ಅಂಕಗಳು | ಅವಧಿ (ಗಂಟೆ |
|---|---|---|---|---|
| ಪತ್ರಿಕೆ-1 | **ಕನ್ನಡ ಭಾಷಾ ಪರೀಕ್ಷೆ**:- 1). ವಿಷಯದ ಸಮಗ್ರ ಅರ್ಥೈಸುವಿಕೆ, 2). ಪದ ಪ್ರಯೋಗ, 3) ವಿಷಯ ಸಂಕ್ಷೇಪಣೆ, 4). ಪದ ಜ್ಞಾನ, 5). ಇಂಗ್ಲೀಷ್‌ನಿಂದ ಕನ್ನಡಕ್ಕೆ ಭಾಷಾಂತರ | 150 | 150 | 3 ಗಂಟೆ |
| ಪತ್ರಿಕೆ-2 | **ಸಾಮಾನ್ಯ ಅಧ್ಯಯನ**:- 1). History and Cultural Heritage(India & Karnataka); 2). Social & Political Perspective, 3). Indian Economy, Planning, Rural Development, Data Collection Analysis Inerpretation, 4) Physical Features and Natural Resources, 5). Overview of Indian Constitution, 6). Public Administration & Management, International Relations, 7). Role and Impact of Science and Technology in Development of India, Information Technology in Public Domain, 8). Advancement and Modern Trends in Natural Science, Life Science, Agriculture Science, Health and Hygiene, 9). Challenges and Issues of Development on Environment and Ecology, 10). Ethics, 11). Integrity, 12). Aptitude. | 150 | 150 | 3 ಗಂಟೆ |
| ಪತ್ರಿಕೆ-3 | ಕರ್ನಾಟಕ ನಾಗರಿಕ ಸೇವಾ ನಿಯಮಗಳು, ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957, ಕರ್ನಾಟಕ ಹಣಕಾಸು ಸಂಹಿತೆ, ಕರ್ನಾಟಕ ಖಜಾನೆ ಸಂಹಿತೆ, ಆಕಸ್ಮಿಕ ವೆಚ್ಚದ ಕೈಪಿಡಿ, ಕರ್ನಾಟಕ ಶಿಕ್ಷಣ ಕಾಯ್ದೆ, 1983, ಹದಿಹರೆಯದ ಮನೋವಿಜ್ಞಾನ ಮತ್ತು ಆಡಳಿತಾತ್ಮಕ ಉದ್ದೇಶಗಳಿಗೆ ಅಗತ್ಯವಾದ ಇತರ ವಿಷಯಗಳು. | 150 | 150 | 3 ಗಂಟೆ |

**ಸೂಚನೆ**:- ಪತ್ರಿಕೆ-2 ರ ಪ್ರಶ್ನೆಪತ್ರಿಕೆಯ ವಿವರವಾದ ಪಠ್ಯಕ್ರಮವನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿರುತ್ತದೆ.

i. **ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆ-1 - ಕನ್ನಡ ಭಾಷಾ ಪತ್ರಿಕೆಯನ್ನು** ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು. ಈ ಪತ್ರಿಕೆಯ ಪಠ್ಯಕ್ರಮವು ಕರ್ನಾಟಕ ಗೆಜೆಟೆಡ್ ಪ್ರೊಬೇಷನರಿ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ) ನಿಯಮಗಳು 1997 ರಲ್ಲಿ ನಿರ್ದಿಷ್ಟಪಡಿಸಿದ ಮುಖ್ಯ ಪರೀಕ್ಷೆಯ ಪಠ್ಯಕ್ರಮದಂತೆಯೇ ಇದ್ದು, ಪ್ರಶ್ನೆಗಳು ಬಹು ಆಯ್ಕೆ ಮಾದರಿ ಪತ್ರಿಕೆಯಾಗಿರುತ್ತದೆ. **ಪ್ರಾಂಶುಪಾಲರ ಹುದ್ದೆಯ ಆಯ್ಕೆಗೆ ಅರ್ಹತೆ ಪಡೆಯಲು ಅಭ್ಯರ್ಥಿಯು ಕನಿಷ್ಠ 50 ಅಂಕಗಳನ್ನು ಪಡೆಯಬೇಕು. ಆದಾಗ್ಯೂ, ಕನ್ನಡ ಭಾಷಾ ಪತ್ರಿಕೆಯಲ್ಲಿ ಪಡೆದ ಅಂಕಗಳನ್ನು ಮೆರಿಟ್ ಪಟ್ಟಿಯ ತಯಾರಿಕೆಗೆ ಪರಿಗಣಿಸಲಾಗುವುದಿಲ್ಲ ಮತ್ತು ಅದು ಅರ್ಹತಾ ಸ್ವರೂಪಕ್ಕೆ ಮಾತ್ರ ಸೀಮಿತವಾಗಿರುತ್ತದೆ.**

For more job news visit : www.kpscvaani.com

ii. **ಪ್ರಶ್ನೆ ಪತ್ರಿಕೆ-2** ಸಾಮಾನ್ಯ ಅಧ್ಯಯನ ಪತ್ರಿಕೆಯು ಈ ಪತ್ರಿಕೆಯ ಪಠ್ಯಕ್ರಮವು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ) ನಿಯಮಗಳು, 1997 ರಲ್ಲಿ ನಿರ್ದಿಷ್ಟಪಡಿಸಿದ ಮುಖ್ಯ ಪರೀಕ್ಷೆಗಳ ಪಠ್ಯಕ್ರಮದಂತೆಯೇ ಇರುತ್ತದೆ. ಪ್ರಶ್ನೆಗಳು ಬಹು ಆಯ್ಕೆಯ ಪ್ರಕಾರದ್ದಾಗಿರುತ್ತವೆ.

iii. **ಪ್ರಶ್ನೆ ಪತ್ರಿಕೆ-3** ಪ್ರಶ್ನೆಗಳು ಬಹು ಆಯ್ಕೆಯ ಪ್ರಕಾರದ್ದಾಗಿರುತ್ತವೆ.

iv. **ಪತ್ರಿಕೆ-2 ಮತ್ತು ಪತ್ರಿಕೆ-3 ರ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಮಾತ್ರ ಮೆರಿಟ್ ಪಟ್ಟಿಯ ತಯಾರಿಕೆಗೆ ಪರಿಗಣಿಸಲಾಗುವುದು.**

**11. ಋಣಾತ್ಮಕ ಮೌಲ್ಯಮಾಪನ(Negative Valuation):**

i. ಪತ್ರಿಕೆ-2 ಮತ್ತು ಪತ್ರಿಕೆ-3 ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲಿಷ್ ಆವೃತ್ತಿಗಳಲ್ಲಿ ಇದ್ದು, ಉಪನ್ಯಾಸಕರು ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ ಪತ್ರಿಕೆಗಳಿಗೆ ಉತ್ತರಿಸಬಹುದು.

ii. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ, ಆ ಪ್ರಶ್ನೆಗೆ ನಿಗದಿಪಡಿಸಿರುವ ಅಂಕಗಳ ನಾಲ್ಕನೇ ಒಂದು ಭಾಗದಷ್ಟು (0.25) ಅಂಕಗಳನ್ನು ಕಳೆಯಲಾಗುವುದು.

iii. ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ / ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ ನಾಲ್ಕನೇ ಒಂದು ಭಾಗದಷ್ಟು (0.25) ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

**12. ಆಯ್ಕೆ ವಿಧಾನ:**

i. ಉಪನ್ಯಾಸಕರುಗಳು ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ-2 ಮತ್ತು ಪತ್ರಿಕೆ-3 ರಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮತ್ತು ಹುದ್ದೆಗಳ ನೇಮಕಾತಿಯಲ್ಲಿ ಮೀಸಲಾತಿಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಜಾರಿಯಲ್ಲಿರುವ ಸರ್ಕಾರದ ಆದೇಶಗಳಿಗೆ ಒಳಪಟ್ಟು, ಉಪನ್ಯಾಸಕರುಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ದಾಖಲಾತಿಗಳಂತೆ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:2 ರ ಅನುಪಾತದಲ್ಲಿ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಉಪನ್ಯಾಸಕರ ಪಟ್ಟಿಯನ್ನು ಪ್ರಕಟಿಸಿ, ಉಪನ್ಯಾಸಕರ ಮೂಲ ದಾಖಲಾತಿ / ಪ್ರಮಾಣ ಪತ್ರಗಳನ್ನು ಪರಿಶೀಲಿಸಿದ ನಂತರದಲ್ಲಿ, ಉಪನ್ಯಾಸಕರು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಮೆರಿಟ್, ಹುದ್ದೆಗೆ ಅನ್ವಯಿಸುವ ಅರ್ಹತೆಯಂತೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳಿಗೆ 1:1 ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗುವುದು. ತದನಂತರದಲ್ಲಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಹಾಗೂ ಪ್ರಕಟಿಸಿ, ಅಂತಿಮ ಆಯ್ಕೆ ಪಟ್ಟಿಯನ್ನು ಮುಂದಿನ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸಲಾಗುವುದು.

ii. ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಇಬ್ಬರು ಅಥವಾ ಹೆಚ್ಚಿನ ಉಪನ್ಯಾಸಕರುಗಳು ಸಮಾನ ಅಂಕಗಳನ್ನು ಪಡೆದರೆ, ಅಂತಹ ಉಪನ್ಯಾಸಕರುಗಳ ಅರ್ಹತೆಯ ಕ್ರಮವನ್ನು ಅವರ ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು, ವಯಸ್ಸಿನಲ್ಲಿ ಹಿರಿಯನಾದ ಉಪನ್ಯಾಸಕರನ್ನು ಅರ್ಹತಾ ಕ್ರಮದಲ್ಲಿ ಮೇಲಿನ ಸ್ಥಾನದಲ್ಲಿಡಲಾಗುವುದು.

iii. ಆಯ್ಕೆ ಪಟ್ಟಿಯಲ್ಲಿನ ಉಪನ್ಯಾಸಕರುಗಳನ್ನು ಕರ್ನಾಟಕ ನಾಗರಿಕ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಬಂಧನೆಗಳಿಗೆ ಅನುಸಾರವಾಗಿ ಪ್ರತಿಯೊಬ್ಬ ಉಪನ್ಯಾಸಕರ ಸೂಕ್ತತೆ ಮತ್ತು ದೇಹದಾರ್ಢ್ಯತೆ ಬಗ್ಗೆ ಪರಿಶೀಲಿಸಿದ ನಂತರ, ನೇಮಕಾತಿ ಪ್ರಾಧಿಕಾರವು ಆಯ್ಕೆ ಪಟ್ಟಿಯಲ್ಲಿನ ಉಪನ್ಯಾಸಕರುಗಳ ಅರ್ಹತಾ ಕ್ರಮದಲ್ಲಿ ನೇಮಕ ಮಾಡಲಾಗುವುದು.

iv. ಆಯ್ಕೆ ಪ್ರಾಧಿಕಾರವು ಸೂಚಿಸಲಾದ ಖಾಲಿ ಹುದ್ದೆಗಳ 20% ಮೀರದಷ್ಟು ಹೆಚ್ಚುವರಿ ಪಟ್ಟಿಯನ್ನು ಸಹ ಸಿದ್ಧಪಡಿಸಲಾಗುವುದು. ಆಯ್ಕೆ ಪಟ್ಟಿಯಲ್ಲಿ ಅಥವಾ ಪ್ರಕಟಿಸಿದ ಹೆಚ್ಚುವರಿ ಪಟ್ಟಿಯಲ್ಲಿನ ಉಪನ್ಯಾಸಕರುಗಳ ಹೆಸರನ್ನು ಸೇರಿಸುವುದರಿಂದ ಉಪನ್ಯಾಸಕರಿಗೆ ಯಾವುದೇ ನೇಮಕಾತಿ ಹಕ್ಕು ದೊರೆಯುವುದಿಲ್ಲ. ಹೆಚ್ಚುವರಿ ಪಟ್ಟಿಯು ಕರ್ನಾಟಕ ನಾಗರಿಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ), ನಿಯಮಗಳು, 2021 ರಲ್ಲಿ ಸೂಚಿಸಿದಂತೆ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ ಅಥವಾ ಎಲ್ಲಾ ಅಧಿಸೂಚಿತ ಖಾಲಿ ಹುದ್ದೆಗಳನ್ನು

For more job news visit : www.kpscvaani.com

ಭರ್ತಿ ಮಾಡುವವರೆಗೆ, ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ. ಹೆಚ್ಚುವರಿ ಪಟ್ಟಿಯಲ್ಲಿನ ಉಪನ್ಯಾಸಕರುಗಳನ್ನು ನೇಮಕಾತಿ ಪ್ರಾಧಿಕಾರವು ಆಯ್ಕೆ ಪಟ್ಟಿಯಲ್ಲಿ ಭರ್ತಿ ಮಾಡದ ಖಾಲಿ ಹುದ್ದೆಗಳ ಮಟ್ಟಿಗೆ ಮಾತ್ರ ನೇಮಕ ಮಾಡಲಾಗುವುದು.

**13. ಅರ್ಹತಾ ಷರತ್ತುಗಳು:**

i. **ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 10 ವರ್ಷಗಳಿಗಿಂತ ಕಡಿಮೆ ಇಲ್ಲದ ಸೇವೆಯನ್ನು ಪೂರೈಸಿರುವ ಅರ್ಹ ಉಪನ್ಯಾಸಕರುಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುತ್ತಾರೆ;**

ii. **ಕಾರ್ಯನಿರತ ಉಪನ್ಯಾಸಕರುಗಳು ಉಪನ್ಯಾಸಕರ ಹುದ್ದೆಯ ಖಾಯಂ ಪೂರ್ವಾವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸಿರಬೇಕು;**

iii. **ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಹಾಗೂ ಕಾಲಕಾಲಕ್ಕೆ ಆಗುವ ತಿದ್ದುಪಡಿ ನಿಯಮಗಳಂತೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 9 ಸೇವನೆ 2026, ದಿನಾಂಕ: 06.03.2026 ರಂತೆ ದಿನಾಂಕ: 31.12.2026 ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಉತ್ತೀರ್ಣರಾಗಬೇಕು.**

iv. **ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದಂದು ಕಾರ್ಯನಿರತ ಉಪನ್ಯಾಸಕರ ಮೇಲೆ ಯಾವುದೇ ಕ್ರಿಮಿನಲ್ ಮೊಕದ್ದಮೆ ಹಾಗೂ ಇಲಾಖಾ ವಿಚಾರಣೆ ಬಾಕಿ ಇರಬಾರದು ಹಾಗೂ ದಂಡನಾವಧಿಯಲ್ಲಿ ಇರತಕ್ಕದ್ದಲ್ಲ;**

v. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

vi. ದೈಹಿಕ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.**

**14. ಸೇವಾ ಪ್ರಮಾಣ ಪತ್ರ:**

ಕಾರ್ಯನಿರತ ಉಪನ್ಯಾಸಕರುಗಳು ಅರ್ಜಿ ಸಲ್ಲಿಸುವ ಮೊದಲು ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ ಅನುಬಂಧದಲ್ಲಿರುವಂತೆ "**ಸೇವಾ ಪ್ರಮಾಣ ಪತ್ರ**" ವನ್ನು ಪಡೆದಿಟ್ಟುಕೊಂಡು **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

**15. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಕೋರಿ ಬಯಸುವ ಉಪನ್ಯಾಸಕರುಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ (RD ಸಂಖ್ಯೆ ಇರುವ ಪ್ರಮಾಣ ಪತ್ರ ಹೊಂದಿರತಕ್ಕದ್ದು) ಪಡೆದಿಟ್ಟುಕೊಂಡು, ಆನ್‌ಲೈನ್ **ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಯು ಸರಿಯಾದ RD ಸಂಖ್ಯೆಯನ್ನು ನಮೂದಿಸಿ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

1. ಪರಿಶಿಷ್ಟ ಜಾತಿ (**ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಪ್ರಮಾಣ ಪತ್ರವನ್ನು ಪಡೆದು, ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆಯನ್ನು ನಮೂದಿಸತಕ್ಕದ್ದು**) ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಡಿ'**;
2. ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು - **ನಮೂನೆ 'ಇ'**;

For more job news visit : www.kpscvaani.com

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ **RD ಸಂಖ್ಯೆ ಇರುವ ಪ್ರಮಾಣ ಪತ್ರ ಹೊಂದಿರತಕ್ಕದ್ದು.**

3. ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು - ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30.03.2002 ರಂತೆ ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರ **"ನಮೂನೆ-ಹೆಚ್"** ರಲ್ಲಿ ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು.** ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡಿರುವ ನಮೂನೆ-ಹೆಚ್ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು (ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ). ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**ವಿಶೇಷ ಸೂಚನೆ**:- ಸರ್ಕಾರದ ಆದೇಶ ಸಂಖ್ಯೆ: ಸಕಇ 179 ಬಿಸಿಎ 2010, ದಿನಾಂಕ: 16.07.2011 ರಲ್ಲಿ ತಿಳಿಸಿರುವಂತೆ, ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎಂ 2000, ದಿನಾಂಕ: 30.03.2002 ಕ್ರಮ ಸಂಖ್ಯೆ: 3 (ಎ ಯಿಂದ ಎಮ್ ವರೆಗೆ) ಪ್ರವರ್ಗ 3ಎ ದಲ್ಲಿರುವ ಸದರಿ "ಬಲಿಜ" ಮತ್ತು ಉಪ ಜಾತಿಗಳಾದ ಬಲಜಿಗ / ಬಣಜಿಗ / ಗೌಡಬಣಜಿಗ, ನಾಯ್ಡು, ತೆಲಗ ಬಲಿಜ / ತೆಲಗ ಬಣಜಿಗ / ಶೆಟ್ಟಿ ಬಲಿಜ, ಶೆಟ್ಟಿ ಬಣಜಿಗ / ಬಣಜಿಗ ಶೆಟ್ಟಿ, ದಾಸರ ಬಲಿಜ / ದಾಸರ ಬಲಜಿಗ / ದಾಸರ ಬಣಜಿಗ / ದಾಸಬಣಜಿಗ, ಕಸ್ಬನ್, ಮುನ್ನೂರ / ಮುನ್ನಾರ್ / ಮುನ್ನೂಕಾಪ್ತು, ಬಳಿಗಾರ / ಬಳೆ ಬಣಜಿಗ / ಬಳೆಬಲಜಿಗ / ಬಳೆ ಚೆಟ್ಟಿ / ಬಣಗಾರ, ರೆಡ್ಡಿ(ಬಲಿಜ), ಜನಪ್ಪನ್, ಉಪ್ಪಾರ(ಬಲಿಜ), ತುಲೇರು(ಬಲಿಜ) ಜನಾಂಗವನ್ನು ಸಂವಿಧಾನದ ಅನುಚ್ಛೇಧ 15(4) ಶಿಕ್ಷಣ ಸಲುವಾಗಿ ಮಾತ್ರ ಮೀಸಲಾತಿ ಪಡೆಯಲು ಮೇಲ್ಕಂಡ ಆದೇಶ ದಿನಾಂಕ 30.03.2002 ರ ಪಟ್ಟಿಯಲ್ಲಿ ಪ್ರವರ್ಗ-3(ಎ) ಯಿಂದ ಪ್ರವರ್ಗ-2(ಎ) ಗೆ ಸೇರಿಸಲಾಗಿದೆ. ಆದರೆ ಅನುಚ್ಛೇಧ 16(4) ಉದ್ಯೋಗದ ಸಲುವಾಗಿ ಈಗಿರುವಂತೆ ಪ್ರವರ್ಗ-3(ಎ) ದಲ್ಲಿ ಮೀಸಲಾತಿ ಪಡೆಯಲು ಬಲಿಜ ಮತ್ತು ಅದರ ಉಪಜಾತಿಗಳನ್ನು ಮುಂದುವರೆಸಲಾಗಿದೆ. **ಆದ್ದರಿಂದ ಸದರಿ ಆದೇಶದನುಸಾರ ಸದರಿ ಜಾತಿ / ಉಪಜಾತಿಯ ಉಪನ್ಯಾಸಕರುಗಳು ಕಡ್ಡಾಯವಾಗಿ 3(ಎ) ಮೀಸಲಾತಿ ಕೋರತಕ್ಕದ್ದು ಹಾಗೂ 2(ಎ) ಮೀಸಲಾತಿ ಕೋರಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.**

**16. ಮಾಜಿ ಸೈನಿಕ:**

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977 ರನ್ವಯ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಎಂದು ಅರ್ಥ. ಆದರೆ ರಕ್ಷಣಾ ಭದ್ರತಾ ದಳ, ಸಾಮಾನ್ಯ ಮೀಸಲು ಇಂಜಿನಿಯರಿಂಗ್ ಪಡೆ, ಲೋಕ ಸಹಾಯಕ ಸೇನಾ ಮತ್ತು ಅರೆ ಮಿಲಿಟರಿ ಪಡೆಗಳಲ್ಲಿ ಸೇವೆ ಸಲ್ಲಿಸಿರುವ ವ್ಯಕ್ತಿಯನ್ನು; ಮತ್ತು

ಎ). ನಿವೃತ್ತಿ ವೇತನವನ್ನು ಗಳಿಸಿದ ತರುವಾಯ ಅಂಥ ಸೇವೆಯಿಂದ ನಿವೃತ್ತನಾಗುವ ವ್ಯಕ್ತಿಯನ್ನು;

ಅಥವಾ

ಬಿ).ಸೈನಿಕ ಸೇವೆಯಿಂದ ಉಂಟಾದ ವೈದ್ಯಕೀಯ ಕಾರಣಗಳು ಅಥವಾ ಆತನ ನಿಯಂತ್ರಣ ಮೀರಿದ ಪರಿಸ್ಥಿತಿಗಳ ಮೇಲೆ ಅಂಥ ಸೇವೆಯಿಂದ ಬಿಡುಗಡೆ ಮಾಡಿರುವ ಮತ್ತು ವೈದ್ಯಕೀಯ ಅಥವಾ ಇತರ ಅಸಮರ್ಥತಾ ನಿವೃತ್ತಿ ವೇತನವನ್ನು ನೀಡಲಾಗಿರುವ ವ್ಯಕ್ತಿಯನ್ನು;

ಅಥವಾ

For more job news visit : www.kpscvaani.com

ಸಿ). ಆತನ ವೈಯಕ್ತಿಕ ಕೋರಿಕೆಯ ಮೇಲಲ್ಲದೆ ಸಿಬ್ಬಂದಿ ಸಂಖ್ಯೆಯ ಕಡಿತದ ಪ್ರತಿಫಲವಾಗಿ ಅಂಥ ಸೇವೆಯಿಂದ ಆತನನ್ನು ಬಿಡುಗಡೆಗೊಳಿಸಿರುವ ವ್ಯಕ್ತಿಯನ್ನು;

ಅಥವಾ

ಡಿ). ಆತನ ವೈಯಕ್ತಿಕ ಕೋರಿಕೆ ಮೇಲಲ್ಲದೇ ಅಥವಾ ದುರ್ವರ್ತನೆ ಅಥವಾ ಅದಕ್ಷತೆಯ ಕಾರಣದಿಂದ ವಜಾಗೊಳಿಸುವ ಅಥವಾ ತೆಗೆದುಹಾಕುವ ಮೂಲಕವಲ್ಲದೆ ಅನ್ಯಥಾ ನಿಯೋಜಿಸಲಾದ ನಿರ್ದಿಷ್ಟ ಅವಧಿ ಮುಕ್ತಾಯವಾದ ತರುವಾಯ ಅಂಥ ಸೇವೆಯಿಂದ ಬಿಡುಗಡೆಗೊಳಿಸಿರುವ ಮತ್ತು ಉಪದಾನ ನೀಡಿರುವ ವ್ಯಕ್ತಿಯನ್ನು - ಒಳಗೊಳ್ಳುವುದಿಲ್ಲ

ಮತ್ತು ಪ್ರಾದೇಶಿಕ ಸೇವೆಯ ಮುಂದಿನ ಪ್ರವರ್ಗಗಳ ಸಿಬ್ಬಂದಿಯನ್ನು ಎಂದರೆ,

i. ನಿರಂತರ ಸಂಚಿತ ಸೇವೆಗೆ ಸಂಬಂಧಿಸಿದ ನಿವೃತ್ತಿ ವೇತನದಾರರನ್ನು;
ii. ಸೈನಿಕ ಸೇವೆಯ ಕಾರಣಗಳಿಂದ ಅಂಗವಿಕಲರಾದ ವ್ಯಕ್ತಿಗಳನ್ನು ಮತ್ತು
iii. ಶೌರ್ಯ ಪ್ರಶಸ್ತಿ ವಿಜೇತರನ್ನು - ಒಳಗೊಳ್ಳುತ್ತದೆ.

2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ.

ಸೂಚನೆ: ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಮರಣ ಹೊಂದಿದ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದುಕೊಂಡು (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ) ಅಥವಾ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಮಾಜಿ ಸೈನಿಕ ಮೀಸಲಾತಿ ರಡಿಯಲ್ಲಿ ಆಯ್ಕೆಗೊಂಡು ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳು ಸಂಬಂಧಪಟ್ಟ ದಾಖಲೆಗಳನ್ನು **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

**17. ಗ್ರಾಮೀಣ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 08 ಸನೆನಿ 2001, ದಿನಾಂಕ: 13.02.2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ **ಅಪ್‌ಲೋಡ್ ಮಾಡತಕ್ಕದ್ದು**, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಹಾಗೂ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡಿದ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ಲಂಬ ಮೀಸಲಾತಿ (vertical reservation) ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ). (ಈ ಪ್ರಮಾಣಪತ್ರಗಳ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸನೆನಿ 2001 ದಿನಾಂಕ 13-02-2001 ರನ್ವಯ ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಜನರಲ್

For more job news visit : www.kpscvaani.com

ಮೆರಿಟ್ ಅಭ್ಯರ್ಥಿಗಳು, ಮೇಲುಸ್ತರದ ಪರಿಕಲ್ಪನೆಯ ವ್ಯಾಪ್ತಿಯಲ್ಲಿ ಬಾರದ ಅಭ್ಯರ್ಥಿಗಳು ಮಾತ್ರ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಅಧಿಕೃತ ಅಧಿಕಾರಿಯಿಂದ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಪಡೆದು, ಗ್ರಾಮೀಣ ಮೀಸಲಾತಿಯನ್ನು ಕೋರಲು ಅವಕಾಶವಿರುತ್ತದೆ.

**18. ನಮೂನೆ-ಹೆಚ್:**

ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30.03.2022 ರ ಅನುಬಂಧ-II ಹೊಸ ಕೆನೆಪದರ ರಂತೆ ಸೇವೆಯಲ್ಲಿರುವ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳು ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರವನ್ನು ನಮೂನೆ-ಹೆಚ್ ರಲ್ಲಿ ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**19. ಕನ್ನಡ ಮಾಧ್ಯಮ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೇನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗಿದೆ).

**20. ವಿಶೇಷ ಚೇತನ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/149/ಎಸ್‌ಆರ್‌ಆರ್/2020, ದಿನಾಂಕ: 25.09.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಶೇ.4 ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿದ್ದು, ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೇನೆನಿ/2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರ/ UDID ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು ಹಾಗೂ ನೇಮಕಾತಿ ಪ್ರಾಧಿಕಾರಗಳು ತಿಳಿಸುವ ವೈದ್ಯಕೀಯ ಮಂಡಳಿ ಪರಿಶೀಲನೆಗೆ ಹಾಜರಾಗಿ ನಿಯಮಾನುಸಾರ ಅರ್ಹತೆಗಳಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಶೇಷ ಚೇತನ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**21. ತೃತೀಯ ಲಿಂಗದ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸೇನೆನಿ 2020 ದಿನಾಂಕ: 06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ' ಮತ್ತು 'ಡಿ 'ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡ 1 (ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ

For more job news visit : www.kpscvaani.com

ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು, **ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು** ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**22. ಪ್ರಾಧಿಕಾರದೊಡನೆ ಪತ್ರ ವ್ಯವಹಾರ;**

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿ ಸಂಖ್ಯೆ ಮತ್ತು ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

**23. ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB) ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್ನಿನಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಕಲ್ಯಾಣ-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ / ಅಪ್‌ಲೋಡ್ ಮಾಡಬೇಕಾದ ಪ್ರಮಾಣಪತ್ರಗಳು.

1. ಆಧಾರ್ ಕಾರ್ಡ್
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disbaled) ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

For more job news visit : www.kpscvaani.com

4. ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ), ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ RD ಸಂಖ್ಯೆ ಇರುವ ನಿಗದಿತ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5. ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಹೆಚ್ (ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರ) (ಮೀಸಲಾತಿ ಕೋರಿದ್ದಲ್ಲಿ)
6. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆಗೆ ಸೇರಿದ ಆದರೆ ಮೇಲುಸ್ತರದ ಪರಿಕಲ್ಪನೆಯ ವ್ಯಾಪ್ತಿಯಲ್ಲಿ ಬಾರದ ಅಭ್ಯರ್ಥಿಗಳು ಸಂಬಂಧಪಟ್ಟ ನಮೂನೆಯರಲ್ಲಿ) ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3ಎ/ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)
7. ಸೇವಾ ಪ್ರಮಾಣ ಪತ್ರ
8. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9. ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದ ತೃತೀಯ ಲಿಂಗದ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)

**24. ವಿಶೇಷ ಸೂಚನೆಗಳು:**

I. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.

II. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

III. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್‌ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

IV. ಅಭ್ಯರ್ಥಿಯು ಸಲ್ಲಿಸುವ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

V. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು/ ಸೂಚನೆಗಳನ್ನು/ ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

VI. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

VII. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

**25. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: ಮಾಹಿತಿ ಕೇಂದ್ರ - 080-23460460. (10.00 AM to 6.00 PM)

**26. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ

For more job news visit : www.kpscvaani.com

ನೀಡಿರುವವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವವರೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವವರೆಂದು, ಕಂಡುಬಂದಲ್ಲಿ ಅವರು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಗಮನಿಸಿ**:

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್‌ಆರ್‌ಆರ್ 2020, ದಿನಾಂಕ: 25.09.2020, ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 2 ಸೆಹಿಮ 2023, ದಿನಾಂಕ: 08.03.2023, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿಗಳು ಮತ್ತು ಕರ್ನಾಟಕ ಸಾಮಾನ್ಯ ಸೇವೆಗಳು(ಪದವಿ ಪೂರ್ವ ಶಿಕ್ಷಣ) (ನೇಮಕಾತಿ) ನಿಯಮಗಳು ಮತ್ತು ಅದರ ತಿದ್ದುಪಡಿ ನಿಯಮಗಳು ಅನ್ವಯವಾಗುತ್ತವೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ. | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ.<br>(ಪ್ರ-ಎ)<br>(ಪ್ರ-ಬಿ)<br>(ಪ್ರ-ಸಿ) | ಪರಿಶಿಷ್ಟ ಜಾತಿ<br>(ಪ್ರವರ್ಗ-ಎ)<br>(ಪ್ರವರ್ಗ-ಬಿ)<br>(ಪ್ರವರ್ಗ-ಸಿ) | SC<br>(Cat-A)<br>(Cat -B)<br>(Cat -C) | Scheduled Caste<br>(Category -A)<br>(Category -B)<br>(Category -C) |
| ಪ.ಪಂ. | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ-1 | ಪ್ರವರ್ಗ-1 | Cat–1 | Category–1 |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ. | ಮಾಜಿ ಸೈನಿಕ | XMP | Ex- Service Men<br>(Ex-Military person) |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ. | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಮ.ಅ | ಮಹಿಳಾ ಅಭ್ಯರ್ಥಿ | Wom | Woman Candidate |
| ತೃ.ಲಿ. | ತೃತೀಯ ಲಿಂಗಿ | TG | Transgender |

**ಕಾರ್ಯನಿರ್ವಾಹಕ ನಿರ್ದೇಶಕರು,**
**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಸೂಚನೆ**: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣಕ್ಕೆ ಸಂಬಂಧಿಸಿ , ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.

For more job news visit : www.kpscvaani.com

- **ಇಲಾಖೆಯ ಹೆಸರು:ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)**
- **ಹುದ್ದೆ: ಪ್ರಾಂಶುಪಾಲರು**
- **ವೇತನ ಶ್ರೇಣಿ:** 90200-159200

**ಉಳಿಕೆ ಮೂಲ ವೃಂದ**

| ಕ್ರ, ಸಂ | ಮೀಸಲಾತಿ ವರ್ಗ | ಇತರೆ ಅಭ್ಯರ್ಥಿ | ಮಹಿಳೆ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| 1 | ಪ.ಜಾತಿ-ಎ | 2 | 5 | 3 | 1 | - | 1* | - | 12 |
| 2 | ಪ.ಜಾತಿ-ಬಿ | 2 | 4 | 3 | 1 | - | 1* | - | 11 |
| 3 | ಪ.ಜಾತಿ-ಸಿ# | 2 | 3 | 3 | 1 | - | 1* | - | 10 |
| 4 | ಪ.ಪಂ | 2 | 2 | 2 | - | - | 1* | - | 7 |
| 5 | ಪ್ರವರ್ಗ-1 | 2 | 3 | 3 | - | - | 1* | - | 9 |
| 6 | ಪ್ರವರ್ಗ-2ಎ | 6 | 11 | 8 | 3 | 1 | 1*<br>1** | 1 | 32 |
| 7 | ಪ್ರವರ್ಗ-2ಬಿ | 2 | 3 | 3 | - | - | 1* | - | 9 |
| 8 | ಪ್ರವರ್ಗ-3ಎ | 2 | 3 | 2 | - | - | 1* | - | 8 |
| 9 | ಪ್ರವರ್ಗ-3ಬಿ | 2 | 3 | 3 | 1 | - | 1* | - | 10 |
| 10 | ಸಾಮಾನ್ಯ | 24 | 36 | 27 | 10 | 5 | 2*<br>1**<br>1***<br>1*** | 1 | 108 |
| | ಒಟ್ಟು | 46 | 73 | 57 | 17 | 6 | 11*<br>2**<br>1***<br>1**** | 2 | 216 |

**ಷರಾ:-**

1. # ಪರಿಶಿಷ್ಟ ಜಾತಿ ಪ್ರವರ್ಗ-ಸಿಯಲ್ಲಿನ 01 ಗ್ರಾಮೀಣ ಅಭ್ಯರ್ಥಿ ಮತ್ತು 01 ಇತರೆ ಗುಂಪಿನ ಹುದ್ದೆಗಳನ್ನು ಪರಿಶಿಷ್ಟ ಜಾತಿಯ ಪ್ರವರ್ಗ-ಸಿಯಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸುವುದು. ಒಂದು ವೇಳೆ, ಈ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದಿದ್ದಲ್ಲಿ, ಈ ಹುದ್ದೆಗಳನ್ನು ಪ್ರವರ್ಗ "ಸಿ" ಯ ಇತರೆ ಜಾತಿಗಳ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡುವುದು.
2. ಅಂಗವಿಕಲತೆಯ ಸ್ವರೂಪ:-

   * - (Blindness and low vision).

   ** – (Locomotor disability including cerebral palsy, leprosy cured, dwarfism, acid attack victims and muscular dystrophy),

**2--**

For more job news visit : www.kpscvaani.com



*** – (Deaf and Hard of hearing)

**** – (Autism, intellectual disability, specific learning disability and menta illness) (Multiple disabilities from amongst persons under clauses (a) to (d) including deaf blindness in the posts identified for each disabilities.

**(ವಿ. ರಶ್ಮಿ ಮಹೇಶ್)**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಹಾಗೂ ನೇಮಕಾತಿ ಪ್ರಾಧಿಕಾರ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

For more job news visit : www.kpscvaani.com

<u>ಸೇವಾ ಪ್ರಮಾಣ ಪತ್ರ</u>

ಶ್ರೀ / ಶ್ರೀಮತಿ ______________________ ಉಪನ್ಯಾಸಕರು ____________ (ಬೋಧನಾ ವಿಷಯ) ______________ ಸರ್ಕಾರಿ ಪದವಿ ಪೂರ್ವ ಕಾಲೇಜು, ____________ ತಾಲ್ಲೂಕು ____________ ಜಿಲ್ಲೆ. ____________ ದಿನಾಂಕದಂದು ಸೇವೆಗೆ ಸೇರಿದ್ದು ____________ ದಿನಾಂಕಕ್ಕೆ ಪರೀಕ್ಷಾರ್ಥ ಅವಧಿ ಪೂರೈಸಿದ್ದಾರೆಂದು ಆದೇಶ ಸಂಖ್ಯೆ: ______________________ ದಿನಾಂಕ ____________ ರಂದು ಘೋಷಿಸಲಾಗಿರುತ್ತದೆ ಎಂದು ಸೇವಾ ಪುಸ್ತಕದ ಪುಟ ಸಂಖ್ಯೆ ________ ರಲ್ಲಿ ನಮೂದಿಸಿ ದೃಢೀಕರಿಸಿರುತ್ತದೆ.

ಸಹಿ/

ಪ್ರಾಂಶುಪಾಲರು / ಕಛೇರಿ ಮುಖ್ಯಸ್ಥರು

______________________

______________________

For more job news visit : www.kpscvaani.com

## ನಮೂನೆ-ಹೆಚ್

**ಸೇವೆಯಲ್ಲಿರುವ ಮತ್ತು ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಕೆನೆಪದರ ಮಿತಿಗೆ ವಿನಾಯಿತಿ ಪ್ರಮಾಣ ಪತ್ರ**

(ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002, ಅನುಬಂಧ-II ಹೊಸ ಸಮಗ್ರ ಕೆನೆಪದರ)

----------------- ಗ್ರಾಮ ---------------ಪಟ್ಟಣದ------------- ತಾಲ್ಲೂಕು------------ನಗರ--------------ಜಿಲ್ಲೆ ನಿವಾಸಿಯಾದ ಶ್ರೀ/ಶ್ರೀಮತಿ------------------------------------ ಇವರ ಮಗ/ಮಗಳು/ಪತ್ನಿ/ಪತಿಯಾದ, ಶ್ರೀ/ಶ್ರೀಮತಿ/ ಕುಮಾರಿ---------------- ------ವರು ಪ್ರವರ್ಗದ ----------------- ಜಾತಿಗೆ ಸೇರಿದ್ದು ----------- -- ಇಲಾಖೆಯಲ್ಲಿ --------------------- ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಸದರಿಯವರು ಪ್ರಸ್ತುತ ------------------ ಇಲಾಖೆಯಲ್ಲಿನ ------------- ------ ಹುದ್ದೆಗೆ ಅರ್ಜಿ ಸಲ್ಲಿಸುತ್ತಿದ್ದು ಈ ಸಂಬಂಧ ಅರ್ಜಿದಾರರು ನೀಡಿದ ದಾಖಲೆಗಳನ್ನು ಪರಿಶೀಲಿಸಿ ಪ್ರಮಾಣೀಕರಿಸಲಾಗಿದೆ. ಈ ಪ್ರಮಾಣ ಪತ್ರವನ್ನು ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002, ಅನುಬಂಧ-II ಹೊಸ ಸಮಗ್ರ ಕೆನೆಪದರದ ಆದೇಶದಂತೆ ಉದ್ಯೋಗದಲ್ಲಿ ಕೆನೆಪದರಕ್ಕೆ ವಿನಾಯಿತಿಯನ್ನು ಪಡೆಯಲು ಮಾತ್ರ ಪ್ರಮಾಣೀಕರಿಸಲಾಗಿದೆ.

ಸ್ಥಳ:

ತಹಶೀಲ್ದಾರ್

ದಿನಾಂಕ:

________________ ತಾಲ್ಲೂಕು

ಕಛೇರಿಯ ಮೋಹರು

For more job news visit : www.kpscvaani.com

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ (ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

.................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ........................................ ಜಿಲ್ಲೆಯ / ವಿಭಾಗದ ........................................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ........................................ ಎಂಬುವವರ ಮಗ /ಮಗಳಾದ ಶ್ರೀ / ಶ್ರೀಮತಿ ........................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ /ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

◆ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

◆ಸಂವಿಧಾನ

◆ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

◆ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

◆ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

◆ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

◆ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

◆ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತಜಾತಿ/ಬುಡಕಟ್ಟುಗಳ ಆದೇಶ 1988

◆ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ........................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ................................................ ಜಿಲ್ಲಾ / ವಿಭಾಗದ ....................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ............................................................

ತಹಶೀಲ್ದಾರ್................................................

ಪದನಾಮ

ಸ್ಥಳ:

ದಿನಾಂಕ:

ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ:** ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ. ಭಾರತ ಸರ್ಕಾರದ ಪತ್ರಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–I ಗೃಹ ಮಂತ್ರಾಲಯ ಅನುಸಾರವಾಗಿ, ಅಂಥಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

For more job news visit : www.kpscvaani.com

**(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ** (ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

________________ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ________________ ________________ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ________________ ಜಾತಿಯ ________________ ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ:

ತಹಶೀಲ್ದಾರ್

________________ ತಾಲ್ಲೂಕು

ಕಛೇರಿಯ ಮೊಹರು

For more job news visit : www.kpscvaani.com

GOVERNMENT OF KARNATAKA
DEPARTMENT OF SAINIK WELFARE AND RESETTLEMENT
Office of the Deputy Director
Department of Sainik Welfare & Resettlement
(Karnataka)

No. Date:

CERTIFICATE

This is to certify that Shri/Smt/Kum..............................................is an applicant for ...............................in Karnataka is the spouse / son / daughter of No...................... Rank........... Name ....................................................... who died / was permanently disabled while in service according to the certificate issued by Defense Authority. He died / was permanently disabled on .....................

Home address of the individual at the time of joining Defense Service as per the records is:

......................................................................

..........................................................................

Place:
Date:

Signature of the Deputy Director
Department of Sainik Welfare & Resettlement

District .....................................

For more job news visit : www.kpscvaani.com

ನಮೂನೆ – 2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿಗದಿಪಡಿಸಿ ಒಂದು ದೊಡ್ಡ ನಗರಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು ಸಹಿ
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ:
ದಿನಾಂಕ:

---

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ / ಮಗಳು / ಪತಿ / ಪತ್ನಿ / ಶ್ರೀಮತಿ / ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ:

ಮುಖ್ಯೋಪಾಧ್ಯಯರ
ಸಹಿ ಮತ್ತು ಸಂಸ್ಥೆಯ ಮೊಹರು

For more job news visit : www.kpscvaani.com

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇವಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum ............................................................ son / wife / daughter of Shri ........................................................ ......................... Age ............................. old, male / female, Registration No .............................. is a case of

............................. He / She is physically disabled/visual disabled/speech & hearing disabled and has ......................... % (........................percent) permanent (physical impairment visual impairment speech & hearing impairment) in relation to his / her ..................................

Note:

1. This condition is progressive / non-progressive / likely to improve / not likely to improve. *

2. Re-assessment is not recommended/is recommended after a period of ..................... months / years. *

* Strike out which is not applicable

(Recent Attested Photograph showing the disability affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO / Head of Hospital (with seal)

Signature / Thumb impression
of the disabled person

Explanation:-As per Notification No. DPAR 149 SRR 2020 dated 25-09-2020 "Physically Handicapped candidates" or "person with disability" means a person suffering from not less than forty percent of any of the disabilities mentioned in the above said Governmetn rules.

For more job news visit : www.kpscvaani.com

(1) Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;

(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device;

(3) Hearing impairment means loss of sixty decibels or more in the better ear in the conversational range of frequencies.

(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.

(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & pares is in the eye & eyelid, but with no manifest deformity;(ii) manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly;

(6) Mental Retardation:-means a condition of arrested or incomplete development of mind of a person who is specially characterised by sub normality of intelligence;

(7) Mental Illness:- means any mental disorder other than mental retardation.

For more job news visit : www.kpscvaani.com

ಅನುಬಂಧ–ಎ

# ಸ್ವಗ್ರಾಮ ಪ್ರಮಾಣ ಪತ್ರ

(ಅನುಚ್ಛೇಧ 371 (ಜೆ) ಮೇರೆಗೆ)

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದ್ರಾಬಾದ್ – ಕರ್ನಾಟಕ ಮೀಸಲಾತಿಗೆ ಸಲ್ಲಿಸಬೇಕಾದ ಪ್ರಮಾಣ ಪತ್ರದ ದಿನಾಂಕ 29–01–2014ರ ಅಧಿಸೂಚನೆ–1 ರಲ್ಲಿನ (5 (2) ನೇ ನಿಯಮ ನೋಡಿ)

(ಪ್ರಮಾಣ ಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ / ಶ್ರೀಮತಿ ______________________ ರವರು ______________________ ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ______________ ಜಿಲ್ಲೆಯ ______________________ ತಾಲ್ಲೂಕಿನ ______________ ಗ್ರಾಮ / ಪಟ್ಟಣವನ್ನು ತನ್ನ ಸೇವಾ ಪುಸ್ತಕದಲ್ಲಿ ತನ್ನ ಸ್ವಗ್ರಾಮ /ಸ್ಥಳ ಎಂದು ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01–01–2013 ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ಇತ್ತೆಂದು ಸ್ವತಃ ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ: ______________________ ಹೆಸರು ______________________

ದಿನಾಂಕ: ______________________ ಪದನಾಮ ______________________

ಕಛೇರಿ ______________________

ಇಲಾಖೆ ______________________

For more job news visit : www.kpscvaani.com

**ಅನುಬಂಧ–ಎ**

**ಅರ್ಹತಾ ಪ್ರಮಾಣ ಪತ್ರ**

**[ಅನುಚ್ಛೇಧ 371(ಜೆ)ಮೇರೆಗೆ]**

[3(3)ನೇ ನಿಯಮ ನೋಡಿ]

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013]

ಶ್ರೀ / ಶ್ರೀಮತಿ ______________________ ರವರು ______________________ ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ______________ ಜಿಲ್ಲೆಯ ______________ ತಾಲ್ಲೂಕಿನ ______________________ ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: ______________________

ದಿನಾಂಕ: ______________________ ಹೆಸರು ______________________

ಅಸಿಸ್ಟೆಂಟ್ ಕಮಿಷನರ್

______________ ಉಪವಿಭಾಗ

______________ ಜಿಲ್ಲೆ